ಹುಬ್ಬಳ್ಳಿ-ಧಾರವಾಡ, ಗದಗ, ಬಾಗಲಕೋಟೆ, ವಿಜಯಪುರ, ಕೊಪ್ಪಳ, ವಿಜಯನಗರ, ಬೆಳಗಾವಿ, ದಾವಣಗೆರೆ, ರಾಯಚೂರ, ಯಾದಗಿರಿ

# ಪಬ್ಲಿಕ್ PUBLIC FAST ಫಾಸ್ಟ್

ಕನ್ನಡ ದಿನಪತ್ರಿಕೆ

ಧ್ವನಿ ನಿಮ್ಮದು ಸಹಾಯ ನಮ್ಮದು... DAILY NEWS PAPER

E-mail : publicfast31@gmail.com

ಸಂಪಾದಕರು : ಐಶ್ವರ್ಯ ಪಿ. ಉಪ ಸಂಪಾದಕರು : ಇಮ್ರಾನ್ ಹೆಬ್ಬಳ್ಳಿ

● ಸಂಪುಟ : 01 ● ಸಂಚಿಕೆ : 122 ● ದಿನಾಂಕ : 20-09-2026 ರವಿವಾರ KNKAN/26/A2600 ಪುಟ : 4 ಬೆಲೆ : ರೂ. 2 Mobile : 9916890865

# ಬಂದರಿಗೆ ಸಿಎಂ ದಿಢೀರ್ ಭೇಟಿ: ಅಹವಾಲು ಆಲಿಕೆ



**ಮಂಗಳೂರು :** ಮಂಗಳೂರಿನಲ್ಲಿ ಮೊದಲ ಬಾರಿಗೆ ಸಚಿವ ಸಂಪುಟ ಸಭೆ ನಡೆಸಿ ಹೊಸ ಅಧ್ಯಾಯಬರೆದಿರುವಸಿಎಂಡಿಕೆಶಿವಕುಮಾರ್ ಅವರು ಇಂದು ಬೆಳ್ಳಂ ಬೆಳಗ್ಗೆ ಮಂಗಳೂರು ಮೀನುಗಾರಿಕೆ ಬಂದರಿಗೆ ದಿಢೀರ್ ಭೇಟಿ ನೀಡಿ ಮೀನುಗಾರರ ಮನದ ಮಾತುಗಳಿಗೆ, ಅವರ ಸಮಸ್ಯೆಗಳಿಗೆ ಕಿವಿಗೊಟ್ಟರು.

ಬೆಳಗ್ಗೆ 6 ಗಂಟೆಗೆ ಬಂದರಿಗೆ ಭೇಟಿ ನೀಡಿದ ಸಿಎಂ, ಬಂದರು ಪ್ರದೇಶದ ಪರಿಸ್ಥಿತಿಯನ್ನು ಕಣ್ಣಾರೆ ಕಂಡರು. ಜತೆಗೆ ಮೀನುಗಾರಿಕೆ ಬೋಟ್ ನಲ್ಲಿ ಪ್ರಯಾಣ ಮಾಡಿ ಬಂದರು ಅಭಿವೃದ್ಧಿಗೆ ಈಗಾಗಲೇ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳು ಹಾಗೂ ಮುಂದೆ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಅಧಿಕಾರಿಗಳು ಹಾಗೂ ಮೀನುಗಾರರ ಮುಖಂಡರಿಂದ ಮಾಹಿತಿ ಪಡೆದರು.

"ಸದ್ಯ 200 ಬೋಟ್ ಗಳಿಗೆ ಡಾಕ್ ವ್ಯವಸ್ಥೆ ಇದ್ದು, ಪಾಲ್ಗುಣಿ, ನೇತ್ರಾವತಿ ನದಿ ಹಾಗೂ ಅರಬ್ಬಿ ಸಮುದ್ರ ಸೇರುವ ತ್ರಿವೇಣಿ ಸಂಗಮ ಜಾಗದಲ್ಲಿ ಬೋಟ್ ಗಳಿಗೆ ಹೊಸ ಡಾಕ್ ಗಳನ್ನು ಮಾಡಿದರೆ ಹೆಚ್ಚಿನ ಬೋಟ್ ಗಳ ನಿಲ್ದಾಣ-ಕ್ಕೆ ಅವಕಾಶವಾಗುತ್ತದೆ. ಇದಕ್ಕಾಗಿ ಡಜ್ಜಿಂಗ್ ಮಾಡಬೇಕಾಗಿದೆ. 25 ವರ್ಷಗಳಿಂದ ಡಜ್ಜಿಂಗ್ ಆಗಿಲ್ಲ, ಎರಡು ನದಿ ಹಾಗೂ ಅಳಿವೆ ಬಾಗಿಲಲ್ಲಿ ಡಜ್ಜಿಂಗ್ ಮಾಡಬೇಕಾಗಿದೆ" ಎಂದು ಮೀನುಗರರ ಸಂಘದ ಮಾಜಿ ಅಧ್ಯಕ್ಷ ಚೇತನ್ ಬೆಂಗ್ರೆ ಹಾಗೂ ಮೋಹನ್ ಬೆಂಗ್ರೆ ಅವರು ಸಿಎಂಗೆ ವಿವರಿಸಿದರು.

"ಬಂದರಿನ ತಟದಲ್ಲಿ ಮರಳು ತುಂಬಿಕೊಂಡಿರುವ ಹಿನ್ನೆಲೆಯಲ್ಲಿ ಅವುಗಳನ್ನು ತೆಗೆಯಬೇಕು. ಈ ಭಾಗದಲ್ಲಿ ಎಲ್ಲಿ ಆಳವಾದ ಜಾಗ ಇದೆ ಎಂದು ಚಾನಲ್ ಮಾರ್ಕಿಂಗ್ ಬಾಯ್ಸ್ ಗಳನ್ನು ಹಾಕಿದರೆ ಬೋಟ್ ಗಳ ಸುಗಮ ಸಾಗಣೆಗೆ ನೆರವಾಗುತ್ತದೆ" ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ನಂತರ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ವ್ಯಾಪಾರ ಸ್ಥಗಿತ; ಸಿಎಂ ಸಿಡಿಮಿಡಿ**

ಇನ್ನು ಸಿಎಂ ಭೇಟಿ ಹಿನ್ನೆಲೆಯಲ್ಲಿ ಬಂದರಿನಲ್ಲಿ ವ್ಯಾಪಾರ ಮಾಡಲು ಮೀನುಗಾರರಿಗೆ ಅವಕಾಶ ನೀಡದಿರುವುದನ್ನು ಗಮನಿಸಿದ ಸಿಎಂ ಅಧಿಕಾರಿಗಳ ವಿರುದ್ಧ ಸಿಡಿಮಿಡಿಗೊಂಡರು. ಯಾವುದೇ ಕಾರಣಕ್ಕೂ ವ್ಯಾಪಾರ ನಿಲ್ಲಬಾರದು, ಇದರಿಂದ ಮೀನುಗಾರರು ಹಾಗೂ ವ್ಯಾಪಾರಿಗಳ ಜೀವನಕ್ಕೆ ತೊಂದರೆಯಾಗಬಾರದು. ತಕ್ಷಣ ವ್ಯಾಪಾರ ಪ್ರಾರಂಭಿಸಿ" ಎಂದು ಸೂಚಿಸಿದರು.

**ವ್ಯಾಪಾರ ನಿಲ್ಲಿಸಿದವರ ವಿರುದ್ಧ ಕ್ರಮ**

'ನಾನು ಭೇಟಿ ನೀಡಿರುವ ಸಂದರ್ಭದಲ್ಲಿ ಮಂಗಳೂರಿನ ಬಂದರು ಚಟವಟಿಕೆಗಳು ಸ್ಥಬ್ಧವಾಗಿವೆ. ಇದಕ್ಕೆ ಕಾರಣ ಏನು ಎಂಬುದನ್ನು ಅರಿಯಲು ವರದಿ ನೀಡುವಂತೆ ಡಿಸಿ ಹಾಗೂ ಆಯುಕ್ತರಿಗೆ ನಿರ್ದೇಶನ ನೀಡಿದ್ದೇನೆ. ಇದ-ಕ್ಕೆ ಅಧಿಕಾರಿಗಳು ಕಾರಣರಾಗಿದ್ದರೆ ಅವರನ್ನು ಅಮಾನತು ಮಾಡುತ್ತೇನೆ. ಅಕ್ರಮಗಳನ್ನು ಮುಚ್ಚಿಡುವ ದೃಷ್ಟಿಯಿಂದ ಈ ಕೆಲಸ ಮಾಡಿದ್ದರೆ ಸೂಕ್ತ ಕ್ರಮ ಕೈಗೊಳ್ಳುತ್ತೇನೆ. ನನಗೆ ಯಾವ ಭದ್ರತೆಯ ಅಗತ್ಯವಿಲ್ಲ. ನಾನು ಮೀನುಗಾರರು, ವರ್ತಕರು ಹಾಗೂ ದೋಣಿಯನ್ನೇ ನಂಬಿರುವ ಬೆಸ್ತ ಸಮುದಾಯದ ಬದುಕಿನ ವಾಸ್ತವ ಸ್ಥಿತಿಗತಿಯನ್ನು ಅರಿಯಲು ಬಂದಿದ್ದೇನೆ' ಎಂದರು.

**ಅಕ್ರಮ, ಕಾನೂನು ಉಲ್ಲಂಘಿಸಿದರೆ ಕ್ರಮ**

"ದೇಶದ ವಿವಿಧ ಮೂಲೆಗಳಿಂದ ಇಲ್ಲಿಗೆ ಬಂದು ವ್ಯಾಪಾರ ವಹಿವಾಟು ನಡೆಸುತ್ತಾರೆ. ಅವರಿಗೆ ಯಾವುದೇ ರೀತಿಯ ತೊಂದರೆ ಆಗಬಾರದು. ಮೂಲ ಸೌಕರ್ಯಗಳು ದೊರೆಯಬೇಕು, ವಾಹನ ಸಂಚಾರ ಸುಗಮವಾಗಿರಬೇಕು. ಇಲ್ಲಿ ರಸ್ತೆಯನ್ನು ನಿರ್ಬಂದಿಸಿರುವುದು, ಅಕ್ರಮವಾಗಿ ಕಾಂಪೌಂಡ್ ಹಾಕಿರುವುದೆಲ್ಲವೂ ನನ್ನ ಗಮನಕ್ಕೆ ಬಂದಿದೆ.

ಕಾನೂನು ಉಲ್ಲಂಘಿಸಿರುವವರು ಎಷ್ಟೇ ದೊಡ್ಡವರಾಗಿದ್ದರೂ, ಪ್ರಭಾವಶಾಲಿಗಳಾದರು ಯಾವುದೇ ಮುಲಾಜಿಲ್ಲದೇ ಕ್ರಮ ಜರುಗಿಸಬೇಕು. ಖಾಸಗಿ ಆಸ್ತಿಯಾಗಿದ್ದರೆ ದಾಖಲೆಗಳನ್ನು ನೋಡಿ ಸರ್ಕಾರದ ವಶಕ್ಕೆ ಪಡೆಯುತ್ತೇವೆ. ಅಭಿವೃದ್ಧಿಯನ್ನು ಮಾಡುತ್ತೇವೆ" ಎಂದು ಖಡಕ್ ಎಚ್ಚರಿಕೆ ನೀಡಿ-ದರು.

"ಸಣ್ಣ ಮೀನುಗಾರರು ಬೋಟ್ ಗಳನ್ನು ನಿಲ್ಲಿಸುವ ವಿಚಾರವಾಗಿ ಎದುರಿಸುತ್ತಿರುವ ಸಮಸ್ಯೆಗಳನ್ನು ನನ್ನ ಗಮನಕ್ಕೆ ತಂದಿದ್ದಾರೆ. ಜಿಲ್ಲಾ ಉಸ್ತುವಾರಿ ಮಂತ್ರಿಗಳು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ಬಗ್ಗೆ ತೀರ್ಮಾ ಮಾಡುತ್ತೇವೆ" ಎಂದು ಹೇಳಿದರು.

"ಮೀನುಗಾರರದ್ದು ದೊಡ್ಡ ಸಮುದಾಯ. ಎಲ್ಲಾ ವರ್ಗದ ಜನ ಸೌಹಾರ್ದತೆಯಿಂದ ಇಲ್ಲಿ ಕೆಲಸ ಮಾಡುತ್ತಿದ್ದಾರೆ. ಆರ್ಥಿಕ ಶಕ್ತಿ ಕೇಂದ್ರ. ಈ ಸಮುದಾಯಕ್ಕೆ ಪ್ರೋತ್ಸಾಹ ಕೊಡಬೇಕು. ಹೀಗಾಗಿ, ಇಲ್ಲಿ ಪ್ರತ್ಯೇಕ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡಲಾಗುವುದು. ನಾವು ಈಗ ಇರುವ 40-50 ಸೀಟುಗಳನ್ನು 200ಕ್ಕೆ ಏರಿಕೆ ಮಾಡಲಾಗುವುದು, ವಿದ್ಯಾಭ್ಯಾಸ, ಸಮುದ್ರ ಮೆಟ್ರೋ, ನೀಲಿ ಆರ್ಥಿಕತೆಗೆ ಒತ್ತು ನೀಡುವ ಕುರಿತು ನಮ್ಮ ಸರ್ಕಾರ ತೀರ್ಮಾನಿಸಿದೆ" ಎಂದರು.

**16 ಸಾವಿರ ಕೋಟಿ ನಿಮ್ಮ ಮೂಲಸೌಕರ್ಯಕ್ಕೆ**

"ಈಗಾಗಲೇ 32 ಸಾವಿರ ಕೋಟಿ ಮೊತ್ತವನ್ನು ಅಭಿವೃದ್ಧಿಗಾಗಿ ಘೋಷಣೆ ಮಾಡಿದ್ದೇವೆ. ಇದರಲ್ಲಿ 16 ಸಾವಿರ ಕೋಟಿ ಇಲ್ಲಿನ ಗ್ರಾಮೀಣ ಭಾಗದ ರಸ್ತೆ, ನೀರಿನಂಥ ಮೂಲ ಸೌಕರ್ಯಕ್ಕೆ ನೀಡಲಾಗಿದೆ.

ಮಂಗಳೂರು, ಕಾರವಾರಗಳಲ್ಲಿ ಎಲ್ಲೆಲ್ಲಿ ವಹಿವಾಟು ನಡೆಯುತ್ತದೆ ಎಂಬುದರ ಬಗ್ಗೆ ಸಮಗ್ರ ವರದಿ ಪಡೆದು, ಸಮುದ್ರ ಪಕ್ಕದ ಮೀನುಗಾರ ಕುಟುಂಬಕ್ಕೆ ಅಗತ್ಯ ತಾಂತ್ರಿಕ ನೆರವನ್ನು ನೀಡಲು ಯೋಜನೆ ರೂಪಿಸುತ್ತೇವೆ. ಕೆಲವೊಂದು ಸಮಸ್ಯೆಗಳನ್ನು ಮೀನುಗಾರರು ನೇರವಾಗಿ ಹಂಚಿಕೊಳ್ಳಲು ಸಾಧ್ಯವಾಗದೇ ಇರಬಹುದು. ಚಿಂತೆ ಇಲ್ಲ, ಗುಪ್ತ ವರದಿ ತರಿಸಿಕೊಳ್ಳುತ್ತೇನೆ. ಮಾಫಿಯಾಗಳು ಇದೆಯಾ. ತೊಂದರೆ ಆಗುತ್ತಿದೆಯಾ ಎನ್ನುವುದನ್ನು ಗಮನಿಸುತ್ತೇನೆ. ಒಟ್ಟಾರೆ, ನ್ಯಾಯ ಬದ್ಧವಾಗಿ ವ್ಯಾಪಾರ ವಹಿವಾಟು ನಡೆಯಬೇಕು. ಮೀನುಗಾರರ ಸಮುದಾಯ ಅಭಿವೃದ್ಧಿಯಾಗಬೇಕು ಎನ್ನುವುದು ನಮ್ಮ ಗುರಿ" ಎಂದರು.

ಅಳಿವೆಬಾಗಿಲಲ್ಲಿ 35 ವರ್ಷದಿಂದ ಹೂಳು ಎತ್ತಿಲ್ಲ ಅಪಾಯಕಾರಿಯಾಗಿದೆ ಎಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸಿಎಂ, "ಈ ವಿಚಾರ ನನ್ನ ಗಮನಕ್ಕೆ ಬಂದಿದೆ. ಅಲ್ಲಿ ದೋಣಿಯೊಂದು ನಿಂತಿದೆ. ಅದು ಇದೇ ಕಾರಣಕ್ಕೆ ಎನ್ನುವುದು ಸಚಿವ ಖಾದರ್ ಅವರು ವಿವರಿಸಿದ್ದಾರೆ.

ಹೂಳನ್ನು ಸಮುದ್ರಕ್ಕೆ ಬಿಡಬೇಕು ಎಂದು ಕೆಲವರು ಸಲಹೆ ನೀಡಿದ್ದಾರೆ. ಇನ್ನೂ ಕೆಲವರು ಆ ಪ್ರದೇಶವನ್ನು ಮತ್ತಷ್ಟು ವಿಸ್ತಾರ ಮಾಡಿ ಎಂದೂ ಹೇಳಿದ್ದಾರೆ. ಕೇಂದ್ರದ ತಾಂತ್ರಿಕ ಸಮಿತಿ ಇದಕ್ಕೆ ಸಲಹೆ ಕೊಡಬೇಕಂತೆ. ಈ ಬಗ್ಗೆ ಸೂಕ್ತ ಮಾಹಿತಿ ಪಡೆದು ಅಗತ್ಯ ಕ್ರಮ ಕೈಗೊಳುತ್ತೇವೆ. ಹೂಳು ತೆಗೆಯುವ ಪ್ರಕ್ರಿಯೆಗೆ ಲೀಸ್ ಪಡೆಯಬೇಕೆ ಅಥವಾ ಯಂತ್ರ, ದೋಣಿಗಳನ್ನು ಖರೀದಿಸಿ ಹೂಳು ತೆಗೆಸಬೇಕೆ ಎನ್ನುವುದನ್ನು ತೀರ್ಮಾನಿಸುತ್ತೇನೆ. ಈ ಹಿಂದೆ ಸರ್ಕಾರದಿಂದಲೇ ಹೂಳು ತೆಗೆಸುವ ವ್ಯವಸ್ಥೆ ಇತ್ತು. ಈಗಿಲ್ಲ" ಎಂದರು.

**ಕರಾವಳಿ ರಾಜ್ಯ ಮಾತ್ರವಲ್ಲ, ದೇಶದ ಸಂಪತ್ತು**

ನಿನ್ನೆ ಸಚಿವ ಸಂಪುಟಕ್ಕೆ ಈ ಭಾಗದ ಜನರಿಂದ ಬೆಂಬಲ ವ್ಯಕ್ತವಾಗಿದೆಯೇ ಎಂದು ಕೇಳಿದಾಗ "ಕರಾವಳಿ ರಾಜ್ಯದ ಸಂಪತ್ತು ಮಾತ್ರವಲ್ಲ ರಾಷ್ಟ್ರದ ಸಂಪತ್ತು ಕೂಡ ಆಗಿದೆ. ಇದನ್ನು ನಾವು ಕಾಪಾಡಬೇಕು. ಮಂಗಳೂರಿಗಾಗಿ ಅಭಿವೃದ್ಧಿಯ ಪಥ ಚಿಂತನೆ ಮಾಡುತ್ತಿದ್ದೇವೆ. ನಮ್ಮ ಸರ್ಕಾರ ಕರವಾಳಿ ಭಾಗದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಿದೆ. ಇದಕ್ಕಾ 3-4 ಹೊಸ ನೀತಿಗಳನ್ನು ಜಾರಿ ಮಾಡಲು ಚಿಂತನೆ ನಡೆಸಿದ್ದೇವೆ. ಕರಾವಳಿಯಲ್ಲಿ ಹೂಡಿಕೆದಾರರಿಗೆ ಪ್ರೋತ್ಸಾಹ ಕೊಡಬೇಕು. ಹೊಸದಾಗಿ ಹೂಡಿಕೆ ಮಾಡುವವರಿಗೆ ಮೂಲಸೌಕರ್ಯಗಳನ್ನು ಒದಗಿಸಬೇಕು. ಅವರು ಬಂದಾಗ ಇಳಿದುಕೊಳ್ಳುವುದಕ್ಕೆ ಒಳ್ಳೆಯ ಹೋಟೆಲ್ ಗಳ ನಿರ್ಮಾಣ ಮಾಡಬೇಕು. ಇರುವ ಜಾಗವನ್ನು ಗುರಿತಿಸಿ ಕಾನೂನಿನ ಚೌಕಟ್ಟಿನಲ್ಲಿ ಪಿಪಿಪಿ ಮಾದರಿಯಲ್ಲಿ ನಿರ್ಮಾಣಕ್ಕೆ ಅವಕಾಶ ಮಾಡಿಕೊಡುತ್ತೇವೆ" ಎಂದು ವಿವರಿಸಿದರು.

**ಆರ್ ಅಶೋಕ್ ಅವರಿಗೆ ಮೀನು ಕಳುಹಿಸಿ ಆಸೆ ತೀರಿಸೋಣ**

"ವಿರೋಧ ಪಕ್ಷ ನಾಯಕ ಅಶೋಕ್ ಅವರಿಗೆ ಮೀನು ತಿನ್ನುವ ಆಸೆಯಾಗಿದೆ. ಅವರಿಗೆ ಮೀನು ಬೇಕಂತೆ. ಮಂಗಳೂರಿನಿಂದಲೇ ಮೀನನ್ನು ಕಳುಹಿಸಿ, ಅವರ ಆಸೆ ತೀರಿಸೋಣ" ಎಂದು ತಿರುಗೇಟು ನೀಡಿದರು.

'ನಾವು ಕರಾವಳಿ ಅಭಿವೃದ್ಧಿಯ ಬಗ್ಗೆ ಚಿಂತನೆ ಮಾಡುತ್ತಿದ್ದೇವೆ. ವಿರೋಧ ಪಕ್ಷಗಳು ನಮ್ಮ ಅಭಿವೃದ್ಧಿಯ ಪ್ರವಾಸದ ಬಗ್ಗೆ ಕುಹಕಿ ಮಾತುಗಳನ್ನು ಆಡುತ್ತಿವೆ. ವಿರೋಧ ಪಕ್ಷದ ನಾಯಕರು ಮುಖ್ಯಮಂತ್ರಿಗಳು ಮೀನು ತಿನ್ನೋಕೆ ಮಂಗಳೂರಿಗೆ ಹೋಗಿದ್ದಾರೆ ಎಂದಿದ್ದಾರೆ. ನಾನು ಮೀನು ತಿನ್ನುವುದನ್ನು ಬಿಟ್ಟು ಬಹಳ ವರ್ಷಗಳಾಯಿತು. ಇವರಿಗೆ ಅಭಿವೃದ್ಧಿ ಬೇಕಿಲ್ಲ' ಎಂದರು.

**ತುಳು ಭಾಷೆ ಈ ಭಾಗದ ಜನರ ಹೆಮ್ಮೆ:**

ತುಳು ಭಾಷೆಯನ್ನು ಎರಡನೇ ಅಧಿಕೃತ ಭಾಷೆಯಾಗಿ ಘೋಷಣೆ ಮಾಡಿರುವ ಬಗ್ಗೆ ಕೇಳಿದಾಗ, "ತುಳು ಭಾಷೆ ಈ ಭಾಗದ ಜನರ ಹೆಮ್ಮೆ. ಇದು ಈ ಭಾಗದ ಜನರ ನಿರೀಕ್ಷೆಯಗಿತ್ತು. ಎಲ್ಲಾ ಪಕ್ಷದ ನಾಯಕರು ಇದನ್ನು ಬಯಸಿದ್ದರು. ಹೀಗಾಗಿ ನಮ್ಮ ಸರ್ಕಾರ ಮೊದಲ ಬಾರಿಗೆ ಮಂಗಳೂರಿನಲ್ಲಿ ಸಚಿವ ಸಂಪುಟ ಸಭೆ ನಡೆಸಿ ತೀರ್ಮಾನ ಮಾಡಿದ್ದೇವೆ" ಎಂದು ತಿಳಿಸಿದರು.

## ಗಣೇಶೋತ್ಸವದ ಅಂಗವಾಗಿ ರಕ್ತದಾನ ಶಿಬಿರ



**ಮುಂಡರಗಿ :** ರಕ್ತದಾನ ಮನುಷ್ಯನ ದೇಹ ಮತ್ತು ಮಾನಸಿಕ ಆರೋಗ್ಯದ ಮೇಲೆ ಸಕಾರಾತ್ಮಕ ಪರಿಣಾಮ ಬೀರಿ, ಹೃದಯಾಘಾತ ಹಾಗೂ ಕೊಲೆಸ್ಟ್ರಾಲ್ ಕಡಿಮೆ ಗೊಳಿಸಲು ಪ್ರಮುಖ ಆರೋಗ್ಯ ವಿಧಾನವಾಗಿದೆ. ಇಂತಹ ಮಹತ್ತರ ಕಾರ್ಯವನ್ನುಗಣೇಶೋತ್ಸವದಅಂಗವಾಗಿ ಹಮ್ಮಿಕೊಂಡ ಮುಂಡರಗಿ ತಾಲೂಕ ಪಂಚಾಯತ ನಡೆ ಆದರಣೀಯ ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಸಿ.ಆರ್.ಮುಂಡರಗಿ ಹೇಳಿದರು.

ಗಣೇಶೋತ್ಸವ 2026ರ ನಿಮಿತ್ತ ಮುಂಡರಗಿ ತಾಲೂಕು ಪಂಚಾಯತ ಆವರಣದಲ್ಲಿ ತಾಲೂಕು ಆಸ್ಪತ್ರೆ ಮುಂಡರಗಿ ಹಾಗೂ ಬಸವೇಶ್ವರ ರಕ್ತ ಕೇಂದ್ರ, ಗದಗ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯವಂತ ಯುವಕರು ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ಇದರಿಂದ ಆರೋಗ್ಯದ ಮೇಲೆ ಯಾವುದೇ ತೊಂದರೆ ಆಗುವುದಿಲ್ಲ. ಜೊತೆಗೆ ಹೊಸಚೈತನ್ಯ ಮೂಡಿಸುತ್ತದೆ. ಈ ಬಗ್ಗೆ ಪ್ರತಿ ಯೊಬ್ಬರು ಅರಿತುಕೊಂಡು ಸ್ವಯಂ ಪ್ರೇರಿತರಾಗಿ ರಕ್ತದಾನಕ್ಕೆ ಮುಂದಾಗಬೇಕು ಎಂದರು.

ತಾಲೂಕುಪಂಚಾಯತಕಾರ್ಯನಿರ್ವಾಹಕ ಅಧಿಕಾರಿ ವಿಜಯಕುಮಾರ ಬೆಣ್ಣೆ ಮಾತನಾಡಿ, ತಾಲೂಕು ಪಂಚಾಯತ ಮುಂಡರಗಿ ವತಿಯಿಂದ ಪ್ರತಿವರ್ಷ ಗಣೇಶೋತ್ಸವದಲ್ಲಿ ಉಚಿತ ಆರೋಗ್ಯ ತಪಾಸಣೆ, ರಕ್ತದಾನ ಶಿಬಿರವನ್ನು ಆಯೋಜಿಸುವ ಮೂಲಕ ಆರೋಗ್ಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿ ವರ್ಷವು ಕಾರ್ಯಕ್ರಮಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕೆಲ ಅಪಘಾತ ಸಂದರ್ಭಗಳಲ್ಲಿ ರಕ್ತ ಸಿಗದೆ ಮೃತಪಡುತ್ತಿರುವ ಉದಾಹರಣೆಗಳು ನಮ್ಮ ಕಣ್ಮುಂದೆ ಕಾಣಸಿಗುತ್ತಿದ್ದು ಇದನ್ನರಿತು ಶಿಬಿರಗಳಲ್ಲಿ ಪಾಲ್ಗೊಂಡು ರಕ್ತದಾನ ಮಾಡುವುದರ ಮೂಲಕ ಇತರರ ಜೀವ ಉಳಿಸಲು ನೆರವಾಗಬೇಕು ಎಂದು ಹೇಳಿದರು.

ಗ್ಯಾರಂಟಿ ಸಮಿತಿ ಸದಸ್ಯರಾದ ವಿಶ್ವನಾಥ ಪಾಟೀಲ, ಪುಲಕೇಶಿಗೌಡ ಪಾಟೀಲ, ರಾಜೇಸಾಬ ಬೆಟಗೇರಿ, ಕೆಡಿಪಿ ಸಮಿತಿ ಸದಸ್ಯ ಎಂ.ಯು.ಮಕಾಂದಾರ ಮಾತನಾಡಿದರು.

ಆರೋಗ್ಯಶಿಬಿರದಲ್ಲಿ ನೇತ್ರತಪಾಸಣೆ, ಇಸಿಜಿ, ಎನ್ ಸಿಡಿ ಪರೀಕ್ಷಾ ವಿಭಾಗ, ಕ್ಷಯರೋಗ ಪರೀಕ್ಷಾ ವಿಭಾಗ, ಮಧುಮೇಹ, ರಕ್ತದೊತ್ತಡ ಸೇರಿದಂತೆ ಇತರೆ ಆರೋಗ್ಯ ಪರೀಕ್ಷಾ ವಿಧಾನಗಳ ಮೂಲಕ ನೂರಾರು ಜನ ಆರೋಗ್ಯ ತಪಾಸಣೆಗೆ ಒಳಗಾದರು.

ಸಹಾಯಕ ನಿರ್ದೇಶಕರಾದ ವಿಶ್ವನಾಥ ಹೊಸಮನಿ, ಪ್ರವೀಣ ಗೋಣೆಮ್ಮನವರ, ತಾಲೂಕು ವೈದ್ಯಾಧಿಕಾರಿ ಡಾ. ಕೀರ್ತಿಹಾಸ ಎಚ್.ಪಿ, ಫಿಜಿಶಿಯನ್ ಲಕ್ಷ ?ಮಣ ಪೂಜಾರ, ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ, ಜಿಲ್ಲಾ ಉಪಾಧ್ಯಕ್ಷ ಮಹೇಶ ಅಲ್ಲಿಪೂರ, ಪಿಡಿಓ ಸಂಘದ ಜಿಲ್ಲಾಧ್ಯಕ್ಷ ರಿಯಾಜ ಖತೀಬ, ಶಂಕರ ಸರವೆ, ವಸಂತ ಗೋಕಾಕ, ಮಹೇಶ ಕಳಸದ, ಮಂಜುಳಾ ಪಾಟೀಲ, ಫಕ್ರುದ್ದಿನ ನದಾಫ, ಸಂತೋಷ ಮೇಟಿ, ವೀರೇಶ ಅವಾರಿ, ಮಹಾಂತೇಶ ತಳವಾರ, ಪ್ರೇಮಾ ಹಟ್ಟಿ, ಶಶಿಧರ ಹೊಂಬಳ, ಬಸವರಾಜ ಮೇವುಂಡಿ, ಜಗದೀಶ ಅರಣಿ, ತಾಲೂಕು ಪಂಚಾಯತ ಸಿಬ್ಬಂದಿ, ವಿಬಿಜಿ ರಾಮ್ ಜಿ ಸಿಬ್ಬಂದಿ, ಆರೋಗ್ಯ ಇಲಾಖೆ ಸಿಬ್ಬಂದಿ, ವಿವಿಧ ಗ್ರಾಮ ಪಂಚಾಯತಿ ಸಿಬ್ಬಂದಿ ಹಾಜರಿದ್ದರು.

## ವಿದ್ಯಾಭೂಷಣ ರಾಷ್ಟ್ರೀಯ ಪ್ರಶಸ್ತಿ ಪ್ರದಾನ



**ಹುಬ್ಬಳ್ಳಿ :** ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಗಣನೀಯ ಸೇವೆ, ಶೈಕ್ಷಣಿಕ ಬದ್ಧತೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಕಾವ್ಯಶ್ರೀ ಚಾರಿಟೇಬಲ್ ಟ್ರಸ್ಟ್ ವತಿಯಿಂದ ನೀಡಲಾಗುವ ಪ್ರತಿಷ್ಠಿತ "ವಿದ್ಯಾಭೂಷಣ ರಾಷ್ಟ್ರೀಯ ಪ್ರಶಸ್ತಿಗೆ ಪ್ರೊ. ನಾಗರಾಜ ಆರ್. ಮಾಳಗಿ, ಭಾಜನರಾಗಿದ್ದಾರೆ.

ಸನಾ ಶಿಕ್ಷಣ ಮಹಾವಿದ್ಯಾಲಯ ಹುಬ್ಬಳ್ಳಿ ,ಶಿಕ್ಷಣ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ನಾಗರಾಜ ಆರ್. ಮಾಳಗಿ ಅವರ ಶೈಕ್ಷಣಿಕ ಸೇವೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ನೀಡುತ್ತಿರುವ ಕೊಡುಗೆ ಮತ್ತು ಶಿಕ್ಷಣದ ಮೇಲಿನ ನಿಷ್ಠೆಯನ್ನು ಪರಿಗಣಿಸಿ ಈ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಸನಾ ಕಾಲೇಜಿನ ಚೇರ್ಮನ್‌ರಾದ ಒ.ಓ ಮಳಗಿ ಸರ್, ಮ್ಯಾನೇಜಿಂಗ್ ಟ್ರಸ್ಟಿಯಾದ ಅಶ್ರಫ್ ಅಲಿ ಎಕ್ಸಿ ಕ್ಯೂಟೀ ವ ಟ್ರಸ್ಟಿಗಳಾದ ಸವಣೂರ ಹಾಗೂ ಸನಾ ಬಿ. ಎಡ್ ಕಾಲೇಜಿನ ಪ್ರಾಚಾರ್ಯರಾದ ಡಾ. ಆರ್ ಎಸ್ ಪಟಗೆ ಹಾಗೂ ಸನಾ ಕಾಲೇಜಿನ ಎಲ್ಲ ಬೋಧಕ ಬೋಧಕೇತರ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## ಮಾಜಿ ಶಾಸಕರಾದ ಲಿಂ ಶಂಕರಗೌಡ. ವಿ. ಪಾಟೀಲ (ಶಲವಡಿ) 25ನೇ ಪುಣ್ಯಸ್ಮರಣೆ ಕಾರ್ಯಕ್ರಮ



**ನವಲಗುಂದ:** ಉತ್ತರಕರ್ನಾಟಕದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ಪರಿಣಾಮಕಾರಿಯಾಗಿ ತರುವ ನಿಟ್ಟಿನಲ್ಲಿ ದಿ.ಶಾಸಕ ಶಂಕರಗೌಡ.ವಿ.ಪಾಟೀಲಶಲವಡಿ ಮಹತ್ತರ ಪಾತ್ರವಹಿಸುತ್ತಿದ್ದರು ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ತಿಳಿಸಿದರು.

ಅಮರಗೋಳದಲ್ಲಿ ನವಲಗುಂದ ಹಿರಿಯ ಸಹಕಾರಿ ದುರಿಣರು ಹಾಗೂ ಮಾಜಿ ಶಾಸಕರಾದ ಲಿಂ ಶಂಕರಗೌಡ. ವಿ. ಪಾಟೀಲ (ಶಲವಡಿ) 25ನೇ ಪುಣ್ಯಸ್ಮರಣೆ, ಅವರ ಧರ್ಮಪತ್ನಿ ಲಿಂ ಲಕ್ಷ್ಮಿ ?ಮೀಬಾಯಿ ಶಂಕರಗೌಡರು ಪಾಟೀಲ 12ನೇ ಪುಣ್ಯಸ್ಮರಣೆ ಹಾಗೂ ಲಿಂ. ದೇಸಾಯಿಗೌಡ.ಶಂ. ಪಾಟೀಲ 6ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಅವರ ಕುಟುಂಬಸ್ಥರಾದ ಧಾರವಾಡ ಕೆ.ಸಿ.ಸಿ. ಬ್ಯಾಂಕ ಮಾಜಿ ಅಧ್ಯಕ್ಷ ಬಾಪುಗೌಡ ಡಿ. ಪಾಟೀಲ, ಶಂಕರಮ್ಮ ಎಸ್. ಪಾಟೀಲ, ರಾಜುಗೌಡ ಶಂ. ಪಾಟೀಲ, ಪ್ರಭುಗೌಡಶಂ.ಪಾಟೀಲ,ಹಾಗೂ ಧಾರವಾಡ ಜಿಲ್ಲಾ ಸಹಕಾರಿ ಯುನಿಯನ್ ನಿರ್ದೇಶಕರಾದ ಶರಣಗೌಡ. ಬಾಪುಗೌಡ. ಪಾಟೀಲ, ನವಲಗುಂದ ಪಿ. ಎಲ್. ಡಿ. ಬ್ಯಾಂಕ್ ಅಧ್ಯಕ್ಷ ಗುರುಪ್ರಸಾದ ದೇಸಾಯಿಗೌಡರು ಪಾಟೀಲ (ಶಲವಡಿ) ಅವರು ಪ್ರತಿವರ್ಷ ಅವರ ಪುಣ್ಯಸ್ಮರಣೆ ಅಂಗವಾಗಿ ಅರೋಗ್ಯ ತಪಾಸಣೆಯಂತ ಹಲವಾರು ಸಮಾಜಮುಖಿ ಕಾ ಂ ರ್ ್ ಕ ್ ರ ್ ವ ್ ಂ ಗ ್ ಳ ್ ನ ್ ನ ್ ನಡೆಸುತ್ತಿರುವುದು ಶ್ಲಾಘನಿಯ ಎಂದರು.


ಬಾಪೂಗೌಡ ಪಾಟೀಲ ಮಾತನಾಡಿಅಪ್ಪಾ?ಎಂಬಪದವೇ ಅದ್ಭುತ. ನನ್ನ ತಂದೆ ನಮ್ಮನ್ನಗಲಿ 25 ವರ್ಷವಾದರೂ ಅವರ ನೆನಪು ಸದಾ ಚಿರಸ್ಮರಣೀಯ. ನನ್ನ ತಂದೆ ಇಲ್ಲದಿದ್ದರೂ,ಅವರು ಹೇಳಿಕೊಟ್ಟ ಜೀವನದ ಪಾಠ, ಅವರ ಸ್ಫೂರ್ತಿಯ ಮಾತುಗಳು ನನ್ನ ಮನದಲ್ಲಿ ಎಂದೆಂದಿಗೂ ಅಮರ ಎಂದರು.

ನವಲಗುಂದ ಪಿ. ಎಲ್. ಡಿ. ಬ್ಯಾಂಕ್ ಅಧ್ಯಕ್ಷ ಗುರುಪ್ರಸಾದ ದೇಸಾಯಿಗೌಡರು ಪಾಟೀಲ (ಶಲವಡಿ) ಮಾತನಾಡಿ ನಮ್ಮ ಅಜ್ಜನವರು ಮಾಜಿ ಶಾಸಕರಾದ ಶಂಕರಗೌಡ ಪಾಟೀಲ ಹಾಗೂ ದೇಸಾಯಿಗೌಡ.ಶಂ. ಪಾಟೀಲ ಅವರು ಜಾತಿ ಬೇಧ ಮರೆತು ತಮ್ಮ ಜೀವನೂದ್ದಕ್ಕೂ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ನಾಡಿದಾತ್ಯಂತ ಹೆಸರುವಾಸಿ ಯಾಗಿದ್ದರು ಎಂದರು.

ಚಿಕೇನಕೊಪ್ಪದ ಅಂಧರ ಕಲ್ಯಾಣ ಆಶ್ರಮ ಶ್ರೀ ಚನ್ನವೀರ ಶರಣರು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು

ಶಾಸಕ ಎನ್. ಎಚ್ ಕೋನರಡ್ಡಿ,ಮಾಜಿ ಶಾಸಕ ಶಂಕರ ಪಾಟೀಲಮುನೇನಕೊಪ್ಪ, ಮೋಹನ ಲಿಂಬಿಕಾಯಿ, ವೀರಣ್ಣ ಮತ್ತಿಕಟ್ಟಿ, ಐ ಜಿ ಸನದಿ, ವರ್ಧಮಾನಗೌಡ ಹಿರೇಗೌಡ್ರ, ಬಂಗಾರೇಶ ಹಿರೇಮಠ, ಎ ಬಿ ಹಿರೇಮಠ, ಸದುಗೌಡ ಪಾಟೀಲ, ಜೀವನ ಪವಾರ, ಪ್ರಕಾಶ ಶಿಗ್ಲಿ ಇತರರು ಪಾಲ್ಗೊಂಡಿದ್ದರು.

## ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾದ ಗಣೇಶೋತ್ಸವ



**ಹುಬ್ಬಳ್ಳಿ :** ಹುಬ್ಬಳ್ಳಿಯ ರಾಮನಗರದಲ್ಲಿ ಗಣೇಶೋತ್ಸವದ ಅಂಗವಾಗಿ ರಾಮನಗರದ ಮಕ್ಕಾ ಮಸೀದಿವತಿಯಿಂದ ನಡೆದ ಅನ್ನಸಂತರ್ಪಣೆ ಕಾರ್ಯಕ್ರಮವು ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾಯಿತು.

ಗಣೇಶಹಬ್ಬದಸಂಭ್ರಮದಲ್ಲಿಆಯೋಜಿಸಲಾಗಿದ್ದಈ ಕಾರ್ಯಕ್ರಮದಲ್ಲಿ ವಿವಿಧ ಸಮುದಾಯಗಳ ಜನರು ಒಟ್ಟಾಗಿ ಭಾಗವಹಿಸಿ, ಪರಸ್ಪರ ಶುಭಾಶಯಗಳನ್ನು ಹಂಚಿಕೊಂಡರು. ಒಂದೇ ಸ್ಥಳದಲ್ಲಿ ಹಿಂದೂ ಹಾಗೂ ಮುಸ್ಲಿಂ ಸಮುದಾಯದವರು ಆತ್ಮೀಯವಾಗಿ ಬೆರೆತು ಊಟ ಮಾಡುವ ಮೂಲಕ ಸೌಹಾರ್ದತೆ, ಸಹಬಾಳ್ವೆ ಮತ್ತು ಭಾವೈಕ್ಯತೆಯ ಸಂದೇಶ ಸಾರಿದರು.

ಹಬ್ಬಗಳು ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತವಾಗದೆ, ಸಮಾಜದಲ್ಲಿ ಪ್ರೀತಿ, ಸ್ನೇಹ ಮತ್ತು ಒಗ್ಗಟ್ಟನ್ನು ಬೆಳೆಸುವ ವೇದಿಕೆಗಳಾಗಬೇಕು ಎಂಬ ಸಂದೇಶ ಈ ಕಾರ್ಯಕ್ರಮದ ಮೂಲಕ ಮೂಡಿಬಂದಿದೆ.

ರಾಮನಗರದಲ್ಲಿ ಕಂಡುಬಂದ ಈ ಸೌಹಾರ್ದತೆಯ ದೃಶ್ಯವು"ಧರ್ಮಬೇರೆಬೇರೆಯಾದರುಮಾನವಿಯತೆ ಒಂದೇ 'ನಾವು ಎಲ್ಲರೂ ಒಂದೇ ಸಮಾಜದವರು' ಎಂಬ ಭಾವನೆಯನ್ನು ಮತ್ತಷ್ಟು ಗಟ್ಟಿಗೊಳಿಸಿತು.

ಹಿಂದೂ-ಮುಸ್ಲಿಂ ಏಕತೆ, ಸೌಹಾರ್ದತೆ ಮತ್ತು ಸಹೋದರತ್ವಕ್ಕೆ ರಾಮನಗರದ ಗಣೇಶೋತ್ಸವ ಹೊಸ ಸಂದೇಶ ನೀಡಿದೆ.

# ವಿಜಯಪುರ| ಶಾಸಕ ಯತ್ನಾಳ, ಎಂ.ಬಿ.ಪಾಟೀಲ ಸಾಕಿದ ಗಿಳಿ: ವಿಜುಗೌಡ ಪಾಟೀಲ



**ವಿಜಯಪುರ:** 'ಶಾಸಕ ಬಸನಗೌಡ ಪಾಟೀಲ, ಸಚಿವ ಎಂ.ಬಿ.ಪಾಟೀಲ ಸಾಕಿದಗಿಳಿ.ಎಂ.ಬಿ.ಪಾಟೀಲಹೇಳಿದಂತೆ ಕೇಳುವ ಗಿರಾಕಿ. ಅವರೇ ಇವರನ್ನು ಸಾಕಿಕೊಂಡು ಬಂದಿದ್ದಾರೆ. ಇಬ್ಬರೂ ಹೊಂದಾಣಿಕೆ ಮಾಡಿಕೊಂಡು, ಒಳ ಒಪ್ಪಂದದ ರಾಜಕೀಯ ಮಾಡುತ್ತಾರೆ' ಎಂದು ಬಬಲೇಶ್ವರ ವಿಧಾನಸಭಾ ಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ವಿಜುಗೌಡ ಪಾಟೀಲ ಹೇಳಿದರು.

ನಗರದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದಅವರು,'ನನ್ನಮತ್ತುಎಂ.ಬಿ.ಪಾಟೀಲರ ನಡುವೆ ಯಾವುದೇ ಹೊಂದಾಣಿಕೆ ರಾಜಕಾರಣವಿಲ್ಲ. ಎಂ.ಬಿ.ಪಾಟೀಲ ಜೊತೆ ನಾನು ಹೊಂದಾಣಿಕೆ ಮಾಡಿಕೊಂಡಿರುವುದನ್ನು ಯತ್ನಾಳ ಸಾಬೀತು ಮಾಡಿದರೆ ರಾಜಕೀಯದಿಂದ ನಿವೃತ್ತಿಯಾಗುತ್ತೇನೆ' ಎಂದು ಸವಾಲು ಹಾಕಿದರು.

ಬಬಲೇಶ್ವರ ಮತ ಕ್ಷೇತ್ರದಲ್ಲಿ ಎಂ.ಬಿ.ಪಾಟೀಲ ವಿರುದ್ಧವಾಗಿ ನನಗೆ ಕಳೆದ ಚುನಾವಣೆಯಲ್ಲಿ 80 ಸಾವಿರ ಜನ ವೋಟ್ ಹಾಕಿದ್ದಾರೆ.

ಪಕ್ಷದ ಕಾರ್ಯಕರ್ತರು ಸ್ವಯಂ ಪ್ರೇರಣೆಯಿಂದ ತಮ್ಮ ಕೈಯಿಂದ ದುಡ್ಡು ಖರ್ಚು ಮಾಡಿ ಚುನಾವಣೆ ಮಾಡಿದ್ದಾರೆ' ಎಂದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಬಲೇಶ್ವರ ಕ್ಷೇತ್ರಕ್ಕೆ ಯತ್ನಾಳ ಅವರನ್ನು ಪ್ರಚಾರಕ್ಕೆ ಕಳಿಸಬೇಡಿ ಎಂದು ಪಕ್ಷದ ವರಿಷ್ಠರಿಗೆ ಮನವಿ ಮಾಡಿದ್ದೆ. ಆದರೂ ಆತ ಬಬಲೇಶ್ವರಕ್ಕೆ ಬಂದು ಬಿಜೆಪಿ ಪರವಾಗಿ ಅಥವಾ ನನ್ನ ಪರವಾಗಿ ಮತಯಾಚನೆ ಮಾಡದೇ ನೀರಾವರಿ ಮಾಡಿದವರಿಗೆ ವೋಟ್ ಹಾಕಿ ಎಂದು ಪರೋಕ್ಷವಾಗಿ ಎಂ.ಬಿ.ಪಾಟೀಲರ ಪರವಾಗಿ ಪ್ರಚಾರ ಮಾಡಿ ಹೋಗಿದ್ದರು' ಎಂದು ಆರೋಪಿಸಿದರು.

ಯತ್ನಾಳ ಅವರ ಇತಿಹಾಸ ನನಗೆ ಗೊತ್ತಿದೆ.

ಮುಂದಿನ ದಿನಗಳಲ್ಲಿ ಜನರ ಮುಂದೆ ಅವರ ಇತಿಹಾಸ ಬಿಚ್ಚಿಡುತ್ತೇನೆ, ಕೋರ್ಟ್‌ನಿಂದ ಸ್ಟೇ ತಂದಿರುವುದು ಏಕೆ ನಿನ್ನ ಇತಿಹಾಸವನ್ನು ಸ್ಕ್ರೀನ್ ಮೇಲೆ ತೋರಿಸುತ್ತೇನೆ'ಎಂದುತಮ್ಮಕೈಯಲ್ಲಿದ್ದ ಮೊಬೈಲ್ ಅನ್ನು ಪ್ರದರ್ಶಿಸಿದರು.

ಯತ್ನಾಳ ಮತ್ತು ಎಂ.ಬಿ.ಪಾಟೀಲರ ನಡುವೆ ಹೊಂದಾಣಿಕೆ ಇಲ್ಲ ಎನ್ನುವುದಾದರೆ ಮುಂದಿನ ಚುನಾವಣೆಯಲ್ಲಿ ತಾಕತ್ತಿದ್ದರೇ ಎಂ.ಬಿ.ಪಾಟೀಲ ವಿರುದ್ಧ ಬಬಲೇಶ್ವರ ಕ್ಷೇತ್ರದಲ್ಲಿ ಚುನಾವಣೆಗೆ ನಿಲ್ಲಬೇಕು, ನಾನು ವಿಜಯಪುರದಲ್ಲಿ ನಿಲ್ಲುತ್ತೇನೆ' ಎಂದು ಸವಾಲು ಹಾಕಿದರು.

ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ನೀಡಿದ ಅನುದಾನದಿಂದ ವಿಜಯಪುರ ಅಭಿವೃದ್ಧಿಯಾಗಿದೆಯೇ ಹೊರತು, ಯತ್ನಾಳ ಅವರಿಂದಲ್ಲ. ಅವರು ಕೊಟ್ಟಅನುದಾನದಲ್ಲಿಯತ್ನಾಳ ಗೋಶಾಲೆ ಹೆಸರಲ್ಲಿ ಕಮಿಷನ್ ಹೊಡೆದಿದ್ದಾರೆ' ಎಂದು ಆರೋಪಿಸಿದರು.

ಬಿಜೆಪಿಗೆ ಮರಳಿ ಬರಲು ಇನ್ನಿಲ್ಲಿಲ್ಲದ ಪ್ರಯತ್ನ ಮಾಡುತ್ತಿದ್ದಾರೆ.

ಆದರೆ, ಯಾರೂ ಸೊಪ್ಪು ಹಾಕುತ್ತಿಲ್ಲ. ಜೆಸಿಬಿ ಪಕ್ಷ ಮಾಡುತ್ತೇನೆ ಎಂದವರು ತಾಕತ್ತಿದ್ದರೆ ಮಾಡಿ, ಚುನಾವಣೆ ಎದುರಿಸಬೇಕು' ಎಂದು ಸವಾಲು ಹಾಕಿದರು.

ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಗುರುಲಿಂಗಪ್ಪ ಅಂಗಡಿ, ರಮೇಶ ಬಿದನೂರು,

ಪರಶುರಾಮ ರಜಪೂತ, ಮಹಾವೀರ ಕುಸನಾಳ, ಸಂತೋಷ ಕುರದಡ್ಡಿ, ಪೀರಗೊಂಡ ಗದ್ಯಾಳ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# ಬಳವಾಡದ ಶ್ರೀ ಅಪ್ಪಯ್ಯ ಸ್ವಾಮಿಯ ಮಠವು ಈ ಭಾಗದ ಜನರಧಾರ್ಮಿಕ ಹಾಗೂ ಆಧ್ಯಾತ್ಮಿಕ ನಂಬಿಕೆಯ ಪ್ರಮುಖ ಕೇಂದ್ರವಾಗಿದೆ : ಚಿದಾನಂದ ಸವದಿ

**ಅಥಣಿ:**ಪವಿತ್ರಶ್ರಾವಣಮಾಸದಅಂಗವಾಗಿ ಅಥಣಿ ತಾಲೂಕಿನ ಬಳವಾಡ ಗ್ರಾಮದ ಆರಾಧ್ಯ ದೈವ ಶ್ರೀ ಅಪ್ಪಯ್ಯ ಸ್ವಾಮಿಯ ಜಾತ್ರಾ ಮಹೋತ್ಸವವು ಭಕ್ತಿಭಾವ ಹಾಗೂ ಸಂಭ್ರಮ ಸಡಗರದ ವಾತಾವರಣದಲ್ಲಿ ಅದ್ದೂರಿಯಾಗಿ ಜರುಗಿತು. ಕರ್ನಾಟಕದ ವಿವಿಧ ಭಾಗಗಳಿಂದ ಮಾತ್ರವಲ್ಲದೆ ನೆರೆ–ಯ ಮಹಾರಾಷ್ಟ್ರ ರಾಜ್ಯದಿಂದಲೂ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಶ್ರೀ ಅಪ್ಪಯ್ಯ ಸ್ವಾಮಿಯ ದರ್ಶನ ಪಡೆದು ಪುನೀತರಾದರು.

ಶ್ರಾವಣ ಮಾಸದ ಒಂದು ತಿಂಗಳ ಪರ್ಯಂತ ಶ್ರೀ ಅಪ್ಪಯ್ಯ ಸ್ವಾಮಿಯ ಮಠದ ಆಶ್ರಯದಲ್ಲಿ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮನ ಜೀವನ ದರ್ಶನ ಕುರಿತ ಪ್ರವಚನ ಕಾರ್ಯಕ್ರಮವನ್ನು ಪೂಜ್ಯ ಡಾ. ವಿವೇಕಾನಂದ ಮಹಾಸ್ವಾಮಿಗಳು ನಡೆಸಿಕೊಟ್ಟರು ಇದರೊಂದಿಗೆ ಬುತ್ತಿ ಜಾತ್ರೆ ಸೇರಿದಂತೆ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಶ್ರಾವಣ ಮಾಸದ ಉತ್ಸವಕ್ಕೆ ಮತ್ತಷ್ಟು ಮೆರುಗು ನೀಡಿದವು.

ಜಾತ್ರೆಯ ಪ್ರಮುಖ ಆಕರ್ಷಣೆಯಾಗಿ ಶ್ರೀ ಅಪ್ಪಯ್ಯ ಸ್ವಾಮಿಯ ಪಲ್ಲಕ್ಕಿ ಮೆರವಣಿಗೆ ನಡೆಯಿತು. ಡೊಳ್ಳು, ನಗಾರಿ, ಕರಡಿ ಕುಣಿತ ಸೇರಿದಂತೆ ವಿವಿಧ ವಾದ್ಯಮೇಳಗಳ ನಾದದೊಂದಿಗೆ ಪಲ್ಲಕ್ಕಿ ಮೆರವಣಿಗೆ ಸಾಗಿದಾಗ ಭಕ್ತರು ಭಕ್ತಿಪರವಶರಾದರು. ಮಹಿಳೆಯರು ಕುಂಭಗಳನ್ನು ಹೊತ್ತು ಕುಂಭಮೇಳದಲ್ಲಿ ಪಾಲ್ಗೊಂಡಿದ್ದು



ಜಾತ್ರೆಯ ವೈಭವವನ್ನು ಮತ್ತಷ್ಟು ಹೆಚ್ಚಿಸಿತು. ಗ್ರಾಮದೆಲ್ಲೆಡೆ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಶ್ರೀ ಅಪ್ಪಯ್ಯ ಸ್ವಾಮಿ ಭಕ್ತರ ಕಷ್ಟ–ಕಾರ್ಪಣ್ಯಗಳನ್ನು ಪರಿಹರಿಸುವ ಆರಾಧ್ಯ ದೈವ ಎಂಬ ನಂಬಿಕೆ ಭಕ್ತರಲ್ಲಿ ಬಲವಾಗಿದೆ. ತಮ್ಮ ಹರಕೆ ಹಾಗೂ ಪ್ರಾರ್ಥನೆಗಳನ್ನು ಶ್ರೀ ಅಪ್ಪಯ್ಯ ಸ್ವಾಮಿಯ ಸನ್ನಿಧಿಯಲ್ಲಿ ಸಲ್ಲಿಸಿದರೆ ಇಷ್ಟಾರ್ಥಗಳು ಈಡೇರುತ್ತವೆ ಎಂಬ ಅಪಾರ ಭಕ್ತಿ ಭಾವದಿಂದ ದೂರದೂರುಗಳಿಂದ ಭಕ್ತರು ಆಗಮಿಸಿದ್ದರು.ವಿಶೇಷವಾಗಿ ಸಂತಾನ ಭಾಗ್ಯಕ್ಕಾಗಿ ಹರಕೆ ಹೊರುವ ದಂಪತಿಗಳು ಶ್ರೀ ಅಪ್ಪಯ್ಯ ಸ್ವಾಮಿಯ ಸನ್ನಿಧಿಗೆ ಬಂದು ಪ್ರಾರ್ಥನೆ ಸಲ್ಲಿಸುವುದು ಇಲ್ಲಿನ ಪ್ರಮುಖ ಧಾರ್ಮಿಕ ಆಚರಣೆಗಳಲ್ಲಿ ಒಂದಾಗಿದೆ. ತಮ್ಮ ಹರಕೆ ಈಡೇರಿದ ಬಳಿಕ ಕುಟುಂಬ ಸಮೇತವಾಗಿ ಮಠಕ್ಕೆ ಆಗಮಿಸಿ ಕೃತಜ್ಞತೆ ಸಲ್ಲಿಸುವ ಭಕ್ತರೂ ಅನೇಕರು ಇದ್ದಾರೆ.

ಯುವಕರಿಗೆ ಮಾರ್ಗದರ್ಶನದ ಕೇಂದ್ರ : ಶ್ರೀ ಅಪ್ಪಯ್ಯ ಸ್ವಾಮಿಯ ಮಠವು ಕೇವಲ ಧಾರ್ಮಿಕ ಕ್ಷೇತ್ರವಾಗಿ ಮಾತ್ರವಲ್ಲದೆ ಯುವಕರಿಗೆ ಪ್ರೇರಣೆ ಹಾಗೂ ಮಾರ್ಗದರ್ಶನ ನೀಡುವ ಕೇಂದ್ರವಾಗಿಯೂ ಗುರುತಿಸಿಕೊಂಡಿದೆ. ಅನೇಕ ಯುವಕರು ಸರ್ಕಾರಿ ನೌಕರಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ಮಠದ ಆಶೀರ್ವಾದ ಮತ್ತು ಪ್ರೇರಣೆಯನ್ನು ಪಡೆಯುತ್ತಿದ್ದಾರೆ. ಯುವಕರಲ್ಲಿ ಶಿಸ್ತು, ಸಂಸ್ಕಾರ, ಆತ್ಮವಿಶ್ವಾಸ ಹಾಗೂ ಸೇವಾ ಮನೋಭಾವ ಬೆಳೆಸುವಲ್ಲಿ ಮಠದ ಪಾತ್ರ ಮಹತ್ವದ್ದಾಗಿದೆ ಎಂಬ ಅಭಿಪ್ರಾಯ ಭಕ್ತರಿಂದ ವ್ಯಕ್ತವಾಯಿತು.

ರಾಜಕೀಯ ಗಣ್ಯರಿಗೂ ಆಧ್ಯಾತ್ಮಿಕ ನೆಲೆ : ಶ್ರೀ ಅಪ್ಪಯ್ಯ ಸ್ವಾಮಿಯ ಮಠವು ವಿವಿಧ ರಾಜಕೀಯ ಪಕ್ಷಗಳ ನಾಯಕರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಮಠಕ್ಕೆ ಆಗಮಿಸಿ ಮ ನಿ ಪ್ರ ರಾಚೋಟೇಶ್ವರ ಶ್ರೀಗಳ ಆಶೀರ್ವಾದ ಪಡೆಯುತ್ತಿರುವುದು ಮಠದ ಮೇಲಿನ ಗೌರವ ಹಾಗೂ ನಂಬಿಕೆಗೆ ಸಾಕ್ಷಿಯಾಗಿದೆ. ಜಾತಿ, ಮತ, ಪಕ್ಷಭೇದಗಳನ್ನು ಮೀರಿ ಎಲ್ಲರನ್ನೂ ಸಮಾನವಾಗಿ ಸ್ವಾಗತಿಸುವ ಮಠದ ಪರಂಪರೆಗಮನಾರ್ಹವಾಗಿದೆ.ಜಾತ್ರೆಯಲ್ಲಿ ಮ ನಿ ಪ್ರ ಸ್ವರೂಪಿ ಶ್ರೀ ರಾಚೋಟೇಶ್ವರ ಶ್ರೀಗಳು ಶ್ರೀ ಮುರುಘೇಂದ್ರ ಸ್ವಾಮಿಗಳು ಚಿಕ್ಕ ಗುರುನಂಜೇಶ್ವರ ಮಹಾಸ್ವಾಮಿಗಳು ಭರತನೂರು ಹಾಗೂ ಶ್ರೀ ಅಪ್ಪಯ್ಯ ಸ್ವಾಮಿ ಮಠದ ಭಕ್ತರು ಗ್ರಾಮಸ್ಥರು ಮಹಿಳೆಯರು ಯುವಕರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಅಥಣಿತಾಲೂಕಿನಬಳವಾಡದಶ್ರೀಅಪ್ಪಯ್ಯ ಸ್ವಾಮಿಯ ಮಠವು ಈ ಭಾಗದ ಜನರ ಧಾರ್ಮಿಕ ಹಾಗೂ ಆಧ್ಯಾತ್ಮಿಕ ನಂಬಿಕೆಯ ಪ್ರಮುಖಕೇಂದ್ರವಾಗಿದೆ.ಶತಮಾನಗಳಭಕ್ತಿ ಪರಂಪರೆಯನ್ನು ಮುಂದುವರಿಸಿಕೊಂಡು ಮಠವು ಧಾರ್ಮಿಕ ಚಟುವಟಿಕೆಗಳ ಜೊತೆಗೆ ಸಮಾಜದಲ್ಲಿ ಸಂಸ್ಕಾರ ಸೇವೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ಶ್ರಾವಣ ಮಾಸದಲ್ಲಿ ನಡೆಯುವ ಪ್ರವಚನಗಳು, ಜಾತ್ರೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜನರಲ್ಲಿ ಭಕ್ತಿ ಮತ್ತು ಸಾತ್ವಿಕ ಚಿಂತನೆ ಮೂಡಿಸುತ್ತಿವೆ ಹಾಗೂ ಕರ್ನಾಟಕ ಮಾತ್ರವಲ್ಲದೆ ಮಹಾರಾಷ್ಟ್ರ ಸೇರಿದಂತೆ ವಿವಿಧ ಪ್ರದೇಶಗಳಿಂದ ಭಕ್ತರು ಶ್ರೀ ಅಪ್ಪಯ್ಯ ಸ್ವಾಮಿಯ ದರ್ಶನಕ್ಕೆ ಆಗಮಿಸುತ್ತಿರುವುದು ಈ ಕ್ಷೇತ್ರದ ಮಹತ್ವವನ್ನು ತೋರಿಸುತ್ತದೆ.

ಚಿದಾನಂದ ಸವದಿ. ಯುವ ನಾಯಕ

# ಸಿದ್ದರಾಮಯ್ಯ ಸಿಎಂ ಆಗಿ ಮುಂದುವರಿಯಲು ಸಹಿ ಸಂಗ್ರಹಿಸಿಲ್ಲ: ಎಂ.ಬಿ. ಪಾಟೀಲ

**ವಿಜಯಪುರ:** 'ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರಿಯುವುದಕ್ಕೆ ಈ ಹಿಂದೆ ವಿರೋಧ ವ್ಯಕ್ತಪಡಿಸಿ ಜಮೀರ್ ಅಹ್ಮದ್ ಖಾನ್, ಸತೀಶ್ ಜಾರಕಿಹೊಳಿ ಮತ್ತು ನಾನು ಸೇರಿದಂತೆ 36 ಶಾಸಕರು ಸಹಿ ಸಂಗ್ರಹಿಸಿದ್ದೇವೆ ಎಂಬ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿರುವುದು ಸಂಪೂರ್ಣ ಸುಳ್ಳು' ಎಂದು ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ.ಯತ್ನಾಳ ಅವರಿಗೆ ಬಾಯಿಗೆ ಬಂದಂತೆ ಮಾತನಾಡುವುದು ಚಾಳಿಯಾಗಿದೆ. ಯತ್ನಾಳ ಅವರು ಇಂತಹ ಆಧಾರರಹಿತ ಹೇಳಿಕೆಗಳನ್ನು ನೀಡುವುದನ್ನು ನಿಲ್ಲಿಸಬೇಕು.ಇಲ್ಲವಾದರೆ, ಸುಳ್ಳು ಮತ್ತು ಅಪಪ್ರಚಾರಕ್ಕೆ ತಕ್ಕ ಉತ್ತರ ನೀಡಲು ನಾವು ಬೇರೆ ದಾರಿ ಹಿಡಿಯಬೇಕಾಗುತ್ತದೆ' ಎಂದು ಎಚ್ಚರಿಕೆ ನೀಡಿದ್ದಾರೆ.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿರಲಿ, ಆಗದೇ ಇರಲಿ, ಅವರೇ ನಮ್ಮ ನಾಯಕರು. ಈ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ' ಎಂದು ಸ್ಪಷ್ಟಪಡಿಸಿದ್ದಾರೆ.

ಸ್ವತಃ ರಾಹುಲ್ ಗಾಂಧಿಯವರೇ ಸಿದ್ದರಾಮಯ್ಯ ಅವರನ್ನು ಕರೆಯಿಸಿಕೊಂಡು ಮಾತನಾಡಿದ್ದಾರೆ. ಚುನಾವಣಾ ರಾಜಕೀಯದಿಂದ ಸಿದ್ದರಾಮಯ್ಯ ಅವರು ಹಿಂದೆ ಸರಿಯಬಾರದು ಎಂಬ ಅಭಿಪ್ರಾಯವನ್ನೂ ವ್ಯಕ್ತಪಡಿಸಿದ್ದಾರೆ.

ಇಂತಹ ಸಂದರ್ಭದಲ್ಲಿ ಯತ್ನಾಳ ಅವರು ತಮ್ಮ ಬಾಯಿಗೆ ಬಂದಂತೆ ಮಾತನಾಡಿ ಪಕ್ಷದಲ್ಲಿ ಗೊಂದಲ ಮೂಡಿಸುವ ಪ್ರಯತ್ನ ಮಾಡುವುದು ಸರಿಯಲ್ಲ' ಎಂದು ತಮ್ಮ 'ಫೇಸ್‌ಬುಕ್' ಪೇಜ್‌ನಲ್ಲಿ ಬರೆದು–ಕೊಂಡಿದ್ದಾರೆ.

# ಅನೇಕತೆಯಲ್ಲಿ ಏಕತೆ ಸಾಧಿಸುವುದೇ ಭಾರತದ ಶಕ್ತಿ: ಎಂ.ಬಿ. ಪಾಟೀಲ

**ವಿಜಯಪುರ:** ಧಾರ್ಮಿಕ ಪರಂಪರೆ, ಆಧ್ಯಾತ್ಮಿಕತೆ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯಲ್ಲಿ ಭಾರತ ಜಗತ್ತಿನಲ್ಲಿಯೇ ಶ್ರೇಷ್ಠ ಸ್ಥಾನ ಹೊಂದಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಬಬಲೇಶ್ವರ ತಾಲೂಕಿನ ಬೆಳ್ಳುಬ್ಬಿ ಗ್ರಾಮದ ಮಳೆ ಮಲ್ಲೇಶ್ವರ ದೇವಸ್ಥಾನದಲ್ಲಿ ಸೋಮವಾರ ನಡೆದ ಅಜಾತ ನಾಗಲಿಂಗ ಮಹಾಸ್ವಾಮಿಗಳ ಮಹಾಪುರಾಣ ಹಾಗೂ ಭಜನಾ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಭಕ್ತಿ, ಜ್ಞಾನ ಮತ್ತು ಸಂಸ್ಕೃತಿಯ ಸಂಗಮವಾಗಿರುವ ಧಾರ್ಮಿಕ ಕಾರ್ಯಕ್ರಮಗಳು ಜನರಲ್ಲಿ ಮಾನವೀಯ



ಮೌಲ್ಯಗಳನ್ನು ಜಾಗೃತಗೊಳಿಸುತ್ತವೆ. ಪುರಾಣ ಹಾಗೂ ಪ್ರವಚನಗಳ ಮೂಲಕ ನಮ್ಮ ಇತಿಹಾಸ ಮತ್ತು ಪರಂಪರೆಯ ಅರಿವು ಮೂಡುತ್ತದೆ.

ಇತಿಹಾಸದಲ್ಲಿ ಒಳಿತು–ಕೆಡುಕು ಎರಡೂ ಇದ್ದು, ಒಳಿತನ್ನು ಮೈಗೂಡಿಸಿಕೊಂಡು ಮುನ್ನಡೆಯಬೇಕು ಎಂದರು.

ಶರಣರು ಪ್ರತಿಪಾದಿಸಿದ ಅನುಭವ ಮಂಟಪದ ಪರಿಕಲ್ಪನೆ ಪ್ರತಿ ಗ್ರಾಮದಲ್ಲೂ ಸಾಕಾರಗೊಳ್ಳಬೇಕು. ಪ್ರತಿ ಗ್ರಾಮವೂ ಎಲ್ಲ ಜಾತಿ, ವರ್ಗ ಹಾಗೂ ಸಮುದಾಯಗಳನ್ನು ಒಳಗೊಂಡ ಅನುಭವ ಮಂಟಪದಂತಾಗಬೇಕು.

ಎಲ್ಲ ಧರ್ಮೀಯರು ಪರಸ್ಪರ ಸೌಹಾರ್ದದಿಂದ ಬದುಕಿದಾಗ ಮಾತ್ರ ಗ್ರಾಮಗಳಲ್ಲಿ ಶಾಂತಿ ಮತ್ತು ಸಾಮರಸ್ಯ ನೆಲೆಸಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗಣಲಿಂಗ ದೇವರು ಹಿರೇಮಠ, ಆಸಂಗಿ ಹಿರೇಮಠದ ಶ್ರೀಗಳು ಹಾಗೂ ಚಂದ್ರಶೇಖರ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು.

ನ್ಯಾಯವಾದಿ ಶ್ರೀನಿವಾಸ ಕೊಂಡಗೂಳಿ, ಬಸವರಾಜ ದೇಸಾಯಿ, ರಮೇಶ ಬಶೆಟ್ಟಿ, ಶಿವಾನಂದ ನ್ಯಾಮಗೌಡ, ಬಸವರಾಜ ಜೈನಾಪುರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೃಷ್ಣಾ ಮೇಲ್ದಂಡೆ ಯೋಜನೆ: ಮುಳುಗಡೆ ಸಂತ್ರಸ್ತರಿಗೆ ಹಕ್ಕುಪತ್ರ ನೀಡುವಂತೆ ಹೋರಾಟ



**ಕೊಲ್ಹಾರ:** ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಮನೆ, ಮಠ ಹಾಗೂ ಭೂಮಿ ಕಳೆದುಕೊಂಡ ಮುಳುಗಡೆ ಸಂತ್ರಸ್ತರಿಗೆ ಮೂರು ದಶಕಗಳು ಕಳೆದರೂ ಹಕ್ಕುಪತ್ರ, ಉತಾರಿ ನೀಡದಿರುವುದನ್ನು ಖಂಡಿಸಿ ಹಾಗೂ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಬುಧವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ರೈತ ಸಂಘದ ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ ಹಾಗೂ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಸಾವಿರಾರು ರೈತರು ಪಾಲ್ಗೊಂಡರು.

ಬಸವೇಶ್ವರ ವೃತ್ತದಿಂದ ತಹಶೀಲ್ದಾರ್ ಕಚೇರಿವರೆಗೆ ಮೆರವಣಿಗೆ ನಡೆಸಿ, ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಶಶಿಕಾಂತ ಗುರೂಜಿ, 1996ರಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಭೂಮಿ ಕಳೆದುಕೊಂಡ ಸಂತ್ರಸ್ತರಿಗೆ ಇಂದಿಗೂ ಹಕ್ಕುಪತ್ರ ಹಾಗೂ ಉತಾರಿ ನೀಡಿಲ್ಲ. ಕೂಡಲೇ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಬೇಕು ಎಂದು ಆಗ್ರಹಿಸಿದರು.

ಪಟ್ಟಣದ ಸ್ಟೇಟ್ ಬ್ಯಾಂಕ್ ಹಿಂಭಾಗದಲ್ಲಿ 25 ವರ್ಷಗಳಿಂದ ತಾತ್ಕಾಲಿಕವಾಗಿ ವಾಸಿಸುತ್ತಿರುವ ಸಂತ್ರಸ್ತರಿಗೆ ನಿವೇಶನ ಕಲ್ಪಿಸಬೇಕು. ನಿವೇಶನ ಮಂಜೂರು ಆಗುವವರೆಗೆ ಅವರಿಗೆ ಯಾವುದೇ ತೊಂದರೆ ನೀಡದೆ ಮೂಲಸೌಕರ್ಯ ಒದಗಿಸಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ವೀರೇಶ ಹಟ್ಟಿಯವರಿಗೆ ಮನವಿ ಮಾಡಿದರು.

ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಮಾತನಾಡಿ, ಬೆಳಗಾವಿ ಚಳಿಗಾಲ ಅಧಿವೇಶನದ ಸಂದರ್ಭದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳಾದ ಆಲಮಟ್ಟಿ ಅಣೆಕಟ್ಟಿನ ಎತ್ತರ, ಭೂ ಪರಿಹಾರ ಹಾಗೂ ನೀರಾವರಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೃಹತ್ ಹೋರಾಟ ನಡೆಸಲಾಗುವುದು ಎಂದರು.

ರಾಜ್ಯ ಉಪಾಧ್ಯಕ್ಷ ಕಲ್ಲು ಸೊನ್ನದ, ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಹಾಗೂ ತಾಲ್ಲೂಕು ಅಧ್ಯಕ್ಷ ಸೋಮುಬಿರಾದಾರಮಾತನಾಡಿ, 1996ರಲ್ಲಿ ಮನೆ, ಮಠ ಹಾಗೂ ಭೂಮಿ ಕಳೆದುಕೊಂಡು ಮೂರು ದಶಕಗಳಿಂದ ಕಚೇರಿಗಳಿಗೆ ಅಲೆದಾಡುತ್ತಿರುವ ಸಂತ್ರಸ್ತರಿಗೆ ಕೂಡಲೇ ಹಕ್ಕುಪತ್ರ ನೀಡಬೇಕು ಎಂದು ಆಗ್ರಹಿಸಿದರು.

ಪ್ರಮುಖ ಬೇಡಿಕೆಗಳು: ಆಲಮಟ್ಟಿ ಜಲಾಶಯಕ್ಕಾಗಿ ಭೂಮಿ ಕಳೆದುಕೊಂಡ ಸಂತ್ರಸ್ತರಿಗೆ ಹಕ್ಕುಪತ್ರ ವಿತರಣೆ, ವಿಜಯಪುರ ಜಿಲ್ಲೆಯ ಎಲ್ಲ ಕೆರೆಗಳನ್ನು ಮುಳವಾಡ ಏತ ನೀರಾವರಿ ಯೋಜನೆಯ ಮೂಲಕ ತುಂಬಿಸುವುದು, ಜನವರಿಯಿಂದ ಜುಲೈವರೆಗೆ ಜನ ಜಾನುವಾರುಗಳ ಕುಡಿಯುವ ನೀರಿಗಾಗಿ 20 ಟಿಎಂಸಿ ನೀರು ಕಾಯ್ದಿರಿಸುವುದು ಹಾಗೂ ರೈತರ ಜಮೀನುಗಳಿಗೆ ಸಮರ್ಪಕವಾಗಿ ತ್ರಿಫೇಸ್ ಮತ್ತು ಸಿಂಗಲ್‌ಫೇಸ್ ವಿದ್ಯುತ್ ಪೂರೈಸುವುದು.

ಪ್ರತಿಭಟನೆ ಹಿನ್ನೆಲೆಯಲ್ಲಿ ಯು–ಕೆಪಿ ವಿಶೇಷ ಜಿಲ್ಲಾಧಿಕಾರಿ, ವಿಜಯಪುರಅಪರಜಿಲ್ಲಾಧಿಕಾರಿ, ಹೆಸ್ಕಾಂ ಅಧಿಕಾರಿಗಳು, ಸ್ಥಳೀಯ ತಾಲ್ಲೂಕು ದಂಡಾಧಿಕಾರಿ ಹಾಗೂ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಪ್ರತಿಭಟನಾಕಾರರೊಂದಿಗೆ ಮಾತುಕತೆ ನಡೆಸಿದರು.

ಬಾಕಿ ಉಳಿದಿರುವ ಮುಳುಗಡೆ ಸಂತ್ರಸ್ತರ ಬೇಡಿಕೆಗಳನ್ನು ನಾಲ್ಕು ತಿಂಗಳೊಳಗೆ ಬಗೆಹರಿಸುವುದಾಗಿಅಧಿಕಾರಿಗಳು ಲಿಖಿತ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಅಂತ್ಯಗೊಳಿಸಲಾಯಿತು.

ಅಪ್ಪುಗೌಡ ಪಾಟೀಲ ಮನಗೂಳಿ, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ರಾಹುಲ್ ಕುಬಕಡ್ಡಿ,ಮಲ್ಲಪ್ಪಅಂಗಡಿ,ಪ್ರೇಮ್ ಚೌಗಲಾ, ಪ್ರಕಾಶ ಉಮ್ರಾಣಿ, ಶಿವಾನಂದ, ಸಿದ್ದು ಬಾಲಗೊಂಡ, ವಿಜಯಮಹಾಂತೇಶ ಗಿಡ್ಡಪ್ಪಗೋಳ, ಸಿ.ಎಸ್. ಗಿಡ್ಡಪ್ಪಗೋಳ, ಈರಣ್ಣಗೌಡ ಕೋಮಾರ,ಸಿ.ಎಂ.ಗಣಕುಮಾರ, ಪೀರಮಮ್ಮದ್ ಗಿರಗಾವಿ ಸೇರಿದಂತೆ ರೈತ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ರೈತರು ಪಾಲ್ಗೊಂಡಿದ್ದರು.

# ಶಿಕ್ಷಣದಷ್ಟೇ ದೈಹಿಕ ಶಿಕ್ಷಣ, ಕ್ರೀಡೆಗೂ ಮಹತ್ವ ನೀಡಿ: ಎಸ್ಪಿ ನಿಂಬರಗಿ

**ವಿಜಯಪುರ:** ಶಿಕ್ಷಣಕ್ಕೆ ನೀಡುವಷ್ಟೇ ಮಹತ್ವವನ್ನು ದೈಹಿಕ ಶಿಕ್ಷಣ ಮತ್ತು ಕ್ರೀಡೆಗೂ ನೀಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಹೇಳಿದರು.

ಬುಧವಾರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ.ಎಂ. ಪಾಟೀಲ ನರ್ಸಿಂಗ್ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಲಬುರಗಿ ವಿಭಾಗೀಯ ಪುರುಷರ ಕಬಡ್ಡಿ ಪಂದ್ಯಾವಳಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಗೆಲುವು–ಸೋಲು ಸಹಜ. ಪ್ರತಿಯೊಂದು ಪಂದ್ಯವೂ ವಿದ್ಯಾರ್ಥಿಗಳಿಗೆ ಹೊಸ ಅನುಭವ ಹಾಗೂ ಕಲಿಕೆಯನ್ನು ನೀಡುತ್ತದೆ. ಗೆಲುವನ್ನು ವಿನಯದಿಂದ



ಸ್ವೀಕರಿಸುವುದು, ಸೋಲಿನಿಂದ ಪಾಠ ಕಲಿತು ಮತ್ತೆ ಪ್ರಯತ್ನಿಸುವುದು ಹಾಗೂ ತಂಡದ ಸಹ ಆಟಗಾರರೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸುವ ಗುಣಗಳನ್ನು ಕ್ರೀಡೆ ಬೆಳೆಸುತ್ತದೆ. ಈ ಗುಣಗಳು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ವೃತ್ತಿಜೀವನದಲ್ಲಿಯೂ ಸಹಕಾರಿಯಾಗುತ್ತವೆ ಎಂದರು.

ದೇಶಿ ಕ್ರೀಡೆಗಳಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡುವ ಅಗತ್ಯವಿದೆ.

ಕಬಡ್ಡಿಯಂತಹ ದೇಶಿ ಕ್ರೀಡೆಗಳು ದೈಹಿಕ ಸಾಮರ್ಥ್ಯದ ಜೊತೆಗೆ ಏಕಾಗ್ರತೆ, ವೇಗ, ತಂತ್ರಗಾರಿಕೆ ಹಾಗೂ ತಂಡದ ಸಹಕಾರದ ಗುಣಗಳನ್ನು ಬೆಳೆಸುತ್ತವೆ. ವಿದ್ಯಾರ್ಥಿಗಳು ಇಂತಹ ಕ್ರೀಡೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಕ್ರೀಡಾ ಸಂಸ್ಕೃತಿಯನ್ನು ಬಲಪಡಿಸಬೇಕು ಎಂದು ಹೇಳಿದರು.

140 ಕೋಟಿಗೂ ಅಧಿಕ ಜನಸಂಖ್ಯೆ ಹೊಂದಿರುವ ಭಾರತದಲ್ಲಿ ಕ್ರೀಡೆಯ ಬಗ್ಗೆ ಆಸಕ್ತಿ ಕಡಿಮೆಯಾಗುತ್ತಿರುವುದು ವಿಷಾದನೀಯ. ವಿದ್ಯಾರ್ಥಿಗಳು ಮೊಬೈಲ್ ಹಾಗೂ ಇತರ ಚಟುವಟಿಕೆಗಳಿಗೆ ಸೀಮಿತವಾಗದೆ ದೈಹಿಕ ಚಟುವಟಿಕೆ ಮತ್ತು ಕ್ರೀಡೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ನಿಯಮಿತ ಕ್ರೀಡಾಭ್ಯಾಸವು ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಉಲ್ಲಾಸಕ್ಕೂ ಸಹಕಾರಿಯಾಗಿದೆ ಎಂದರು.

# ಭಾರತ ಆಧ್ಯಾತ್ಮಿಕ : ಧಾರ್ಮಿಕ ,ಸಾಂಸ್ಕೃತಿಕ ದೇವಾಲಯಗಳ ತೊಟ್ಟಿಲು: ಶಾಸಕ ಯಶವಂತರಾಯಗೌಡ ಪಾಟೀಲ

**ಇಂಡಿ:** ತಾಲೂಕಿನ ನಾದ ಕೆ.ಡಿ ಗ್ರಾಮದಲ್ಲಿ ನಂದಿಬಸವೇಶ್ವರ ಜಾತ್ರಾಮಹೋತ್ಸವ ಹಾಗೂ ಧರ್ಮಸಭೆ ಕಾರ್ಯಕ್ರಮ ಶಾಸಕ ಯಶವಂತರಾಯಗೌಡ ಪಾಟೀಲ ಉದ್ಘಾಟಿಸಿದರು.

ಭಾರತ ದೇಶ ವಿಶ್ವದಲ್ಲಿಯೇ ವಿವಿಧ ಸಾಂಸ್ಕೃತಿ, ಅಧ್ಯಾತ್ಮಿಕ, ಧಾರ್ಮಿಕ ಕ್ಷೇತ್ರದಲ್ಲಿ ತನ್ನದೇಯಾದ ವಿಶೇಷ ಮಹತ್ವ ಸ್ಥಾನ ಪಡೆದುಕೊಂಡಿದ್ದು ಭಾರತ ದೇವಾಲಯಗಳ ತೊಟ್ಟಿಲು , ನಮ್ಮ ಪೂರ್ವಜರು ನಮಗೆ ಒಳ್ಳೇಯ ಸಂಸ್ಕಾರ ಹಾಗೂ ಧಾರ್ಮಿಕ ನಂಬಿಕೆಯಲ್ಲಿ ದಾರಿತೋರಿಸಿದ್ದಾರೆ. ಈ ದೇಶದಲ್ಲಿ ಸಂತ –ಮಹಾಂತರ, ದಾರ್ಶನಿಕರ ಪುಣ್ಯ ಪುರುಷರು ಮಾನವ ಕುಲಕೋಟಿಗೆ ಹೃದಯವಂತರನ್ನಾಗಿಸಿದ್ದಾರೆ. ಹಬ್ಬ ಹರಿದಿನಗಳು ಜಾತ್ರೆಗಳು ಆಚರಣೆ ಮಾಡುವುದರಿಂದ್ದ ಪರಸ್ಪರ ಸಾಮರಸ್ಯ ಮೂಡುವದರೊಂದಿಗೆಮನುಜಮತವಿಶ್ವ–ಪಥಎಂಬಪರಿಕಲ್ಪನೆಜನರಲ್ಲಿಮೂಡುತ್ತದೆ. ಇಂದು ಜಾತ್ರೆಯಲ್ಲಿ ತಾಯಂದಿಯರು ಕುಂಬ ಮೇಳದಲ್ಲಿ ಭಾಗಿಯಾಗಿರುವದು ನೋಡಿದರೆ ರೋಮಾಂಚನ ಜೊತೆ ಭಕ್ತಿಯ ಪರಾಕಾಷ್ಟೆಯಲ್ಲಿ ಇಡೀ ನಾದ




ಬಿ.ಕೆ ಗ್ರಾಮ ಮಿಂದೇದಂತೆ ಗೋಚರಿಸಿದೆ, ಬರದ ಛಾಯ ನಡುವೆ ಈ ಭಾಗದ ಜನರ ಭಕ್ತಿ ಕಡಿಮೆಯಾಗಿಲ್ಲ ಎಂದ–ರೆ ತಪ್ಪಾಗದು . ಇಂದು ಬರ ಆವರಿಸಿದೆ ರೈತರು ಸಂಕಷ್ಟದಲ್ಲಿದ್ದಾರೆ ಸರಕಾರದ ಮಟ್ಟದಲ್ಲಿ ಪ್ರಮಾಣಿಕ ಪ್ರಯತ್ನಿಸುತ್ತೇನೆ. ಯಾವುದೇ ಸರಕಾರಗಳು ಎಷ್ಟೇ ಪ್ರಯತ್ನ ಮಾಡಿದರೂ ಅಸಾಧ್ಯೆ ದೇವರ ದಯೇ ಇರಬೇಕು. ಎಲ್ಲಾ ವರ್ಗಗಳಲ್ಲಿ ರೈತಾಪಿ ವರ್ಗ ತೊಂದರೆಯಲ್ಲಿದೆ ಮೇಘರಾಜ ಮುನಿಸಿಕೊಂಡಂತಾಗಿದೆ. ಭಗವಂತ ಇಡೀ ವಿಶ್ವದ ಮಾನವ ಕುಲಕೋಟಿಗೆ ಒಳ್ಳೇಯ ಆರೋಗ್ಯ ,ಸಂಪತ್ತು ಕರುಣಿಸಲಿ. ಮಳೆ ಬೆಳೆ ಸಮೃದ್ದಿಯಿಂದ ಬಂದು ರೈತರ ಬದುಕು ಒಳ್ಳೇಯದಾಗಲಿ, ಪೂಜ್ಯರ ಕೃಪಶೀವಾದ ಸದಾ ನಮ್ಮ ನಿಮ್ಮೇಲ್ಲರ ಮೇಲಿರಲಿ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿರಶ್ಯಾಡ ಶ್ರೀಮಠದ ಶ್ರೀ ಅಭಿನವ ಮುರುಘೇಂದ್ರ ಶಿವಾಚಾರ್ಯರು ಆರ್ಶೀವಚನ ನೀಡಿದರು.

ಗೋಳಸಾರ ಅಭಿನವ ಪುಂಡಲಿಂಗ ಮಹಾಶಿವಯೋಗಿಗಳು ದಿವ್ಯಸಾನಿಧ್ಯವಹಿಸಿದರು.ಶಿವಾನಂದ ಶಿವಾಚಾರ್ಯರು ನಾದ ಬಿ.ಕೆ, ಪ್ರವಚನ ಕೇಸರಿ ಡಾ.ಶಾಂತವೀರ ಶಿವಾಚಾರ್ಯರರು ಗಡಿಗೌಡಗಾಂವ್,ಚಂದ್ರಶೇಖರ ಶಿವಾಚಾರ್ಯರು ಆಲಮೇಲ ಸಾನಿಧ್ಯವಹಿಸಿದರು.

ಲಿಂಬೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಭೀಮಣ್ಣಾ ಕೌಲಗಿ, ಬ್ಲಾಕ ಕಾಂಗ್ರೆಸ್ ಅಧ್ಯಕ್ಷ ಶಿವಯೋಗೆಪ್ಪ ಚನಗೊಂಡ, ಹಣಮಂತರಾಯಗೌಡ ಪಾಟೀಲ, ನಾದ ಬಿಕೆಗ್ರಾಮದಪಿಕೆಪಿಎಸ್ಅಧ್ಯಕ್ಷಧರ್ಮರಾಜ .ಸಿ ಅವುಜಿ, ಕಾಸುಗೌಡ ಬಿರಾದಾರ, ವಿರಾಜ ಪಾಟೀಲ, ಗುರಲಿಂಗಪ್ಪಸಾಹುಕಾರ ತೆಗ್ಗೆಳ್ಳಿ, ಮಂಜುನಾಥ ವಂದಾಲ, ವಿರೇಂದ್ರ ಬಿ ಪಾಟೀಲ (ಹಲಸಂಗಿ) ಶರ–ಣಗೌಡ ಬಂಡಿ(ರೋಡಗಿ) ಬಸುಗೌಡ ಬಿರಾದಾರ, ನಾದ ಶುಗರ್ಸ ಘಟಕ –02 ರ ಅಧ್ಯಕ್ಷ ರಾಜುಗೌಡ ಸಂಗಪ್ಪ ಕಡಪಟ್ಟಿ ವೇದಿಕೆಲ್ಲಿದ್ದರು.

ಗುರುರಾಜ ಬಿ ಲಾಳಸಂಗಿ ,ಸ್ವಾಗತಿಸಿ ,ನಿರೂಪಿಸಿ ,ಮಲ್ಲಕಣ್ಣಾಗೌಡ ಪಾಟೀಲ ವಂದಿಸಿದರು.

# ಮಸಬಿನಾಳ ಸರ್ಕಾರಿ ಶಾಲೆ: ಎಸ್‌ಡಿಎಂಸಿ ರಚನೆ, ಹೊಸ ಪದಾಧಿಕಾರಿಗಳ ಆಯ್ಕೆ

**ಮಸಬಿನಾಳ:** ಬಸವನ ಬಾಗೇವಾಡಿ ತಾಲ್ಲೂಕಿನ ಮಸಬಿನಾಳ ಗ್ರಾಮದ ಸರ್ಕಾರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯ ನೂತನ ಶಾಲಾ ಅಭಿವೃದ್ಧಿ ಮೇಲುಸ್ತುವಾರಿ ಸಮಿತಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಬಸಲಿಂಗಯ್ಯ ಸಿದ್ದಲಿಂಗಯ್ಯಕೂಡಗಿಮಠ, ಉಪಾಧ್ಯಕ್ಷರಾಗಿ ದೀಪಾ ಖಿಶರಾಜ ರಾಥೋಡ, ಸದಸ್ಯರಾಗಿ ಹನುಮಂತ ಸಿಂದಗಿ, ಶ್ರೀಶೈಲ ಅಗಸರ, ಮಲ್ಲಿಕಾರ್ಜುನ ಕಾರಜೋಳ, ಶರಣು ಹಡಪದ, ಸಿದ್ದಪ್ಪ ನಾಟಿಕಾರ, ರಮೇಶ ಬೀರಗೊಂಡ, ಜ್ಯೋತಿ ಹಡಪದ, ಶಶಿಕಲಾ ಹಡಪದ, ಸುವರ್ಣ ಬಂಡಿ ವಡ್ಡರ, ಪವಿತ್ರಾ ಕುಳಗೇರಿ, ಸರಿತಾ ಕಾಳಗಿ, ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಶಾಲೆಯ ಮುಖ್ಯ ಶಿಕ್ಷಕಿ ಶಕುಂತಲಾ ಓಲೇಕಾರ ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆ ಸಹ ಶಿಕ್ಷಕರಾದ ವಿಜಯಾ ಬಂಡಿವಡ್ಡರ, ನಿಸಾರ ಅಹ್ಮದ ಹತ್ತರಿಕ್ಕಿಹಾಳ, ಸಂಗೀತ ಗೆಜ್ಜಿ, ಭಾರತಿ ಅವಟಿ, ಶಮಿರ್ ಸಯ್ಯದ್ ಉಪಸ್ಥಿತರಿದ್ದರು.

**PUBLIC FAST** KANNADA DAILY NEWS PAPER

ದಿನಾಂಕ : 20–09–2026

# ಕನಕಗಿರಿ। ಎಸ್‌ಐಆರ್; 1,024 ಮತದಾರರಿಗೆ ನೋಟಿಸ್, ವಿಚಾರಣೆ ಪ್ರಕ್ರಿಯೆ ಆರಂಭ



**ಕನಕಗಿರಿ:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಭಾಗವಾಗಿ ತಾಲ್ಲೂಕಿನ ಮತದಾರರ ವಿವರ ವ್ಯತ್ಯಾಸದ ಹಿನ್ನೆಲೆಯಲ್ಲಿ ತಹಶೀಲ್ದಾರ್ ಚಂದ್ರಶೇಖರ ಗಾಳಿ ಅವರು ವಿವರ ವ್ಯತ್ಯಾಸಗೊಂಡ ಮತದಾರರನ್ನು ವಿಚಾರಣೆ ಮಾಡಿದರು.

ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಒಟ್ಟು 1,024 ಮತದಾರರ ವಿವರಗಳು ದೋಷದಿಂದ ಕೂಡಿದ ಕಾರಣ ವಿಚಾರಣೆ ನಡೆಸಿ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಉಳಿಸುವುದು ಹಾಗೂ ಅನರ್ಹರನ್ನು ಮತದಾರರ ಪಟ್ಟಿಯಿಂದ ಕೈ ಬಿಡುವ ಕೆಲಸ ಮಾಡಲಾಗುತ್ತಿದೆ ಎಂದರು.


ಮತದಾರರ ಹೆಸರು, ಪಾಲಕರ ಹೆಸರು, ಜನ್ಮದಿನಾಂಕ, ಇತರೆ ದೋಷಗಳು ಕಂಡು ಬಂದ ಹಿನ್ನೆಲೆಯಲ್ಲಿ ಮತದಾರರಿಗೆ ನೋಟಿಸ್ ನೀಡಲಾಗಿತ್ತು, ಮತಗಟ್ಟೆ ಅಧಿಕಾರಿಗಳ ಸಮ್ಮುಖದಲ್ಲಿ ವಿಚಾರಣೆ ನಡೆಸಿ ಅರ್ಹ ದಾಖಲೆಗಳನ್ನು ಪಡೆಯಲಾಗಿದೆ ಎಂದು ವಿವರಿಸಿದರು.

ಚಿಕಿತ್ಸೆ ಪಡೆಯುತ್ತಿರುವ ಮತದಾರರ ಮನೆ ಬಾಗಿಲಿಗೆ ಭೇಟಿ ನೀಡಿ ವಿಚಾರಣೆ ನಡೆಸಲಾಗಿದೆ, ವಿವರ ವ್ಯತ್ಯಾಸ ಇರುವ ಮತದಾರರೊಬ್ಬರು ಕೊಪ್ಪಳದ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಸೆ.18ರಂದು ಆಸ್ಪತ್ರೆಗೆ ಭೇಟಿ ನೀಡಿ ವಿಚಾರಣೆ ಮಾಡಲಾಗುವುದು ಎಂದು ಗಾಳಿ ವಿವರಿಸಿದರು.

ಈ ಪ್ರಕ್ರಿಯೆಯಲ್ಲಿ ಜಿಲ್ಲಾ ಪಂಚಾಯಿತಿ ಕಾರ್ಯದರ್ಶಿ ಕೃಷ್ಣಮೂರ್ತಿ, ತಾಲ್ಲೂಕು ಪಂಚಾಯತಿ ಪ್ರಭಾರ ಇಒ ರಾಜಶೇಖರ ಕೆ ಅವರು ಭಾಗಿಯಾಗಿ ಆಯಾ ಗ್ರಾಮ ಪಂಚಾಯಿತಿ ಕಚೇರಿ ಗಳಲ್ಲಿ ಪ್ರತ್ಯೇಕವಾಗಿ ವಿಚಾರಣೆ ಮಾಡುತ್ತಿದ್ದಾರೆ ಎಂದರು.

ತಹಶೀಲ್ದಾರ್ ಕಚೇರಿಯ ಕಂಪ್ಯೂಟರ್ ಆಪರೇಟರ್ ವಿಜಯಭಾಸ್ಕರರೆಡ್ಡಿ, ಮತಗಟ್ಟೆ ಅಧಿಕಾರಿಗಳ ಮೇಲ್ವಿಚಾರಕಪುರುಷೋತ್ತಮ್ಮ ಪತ್ತಾರ, ಬೂತ್ ಮಟ್ಟದ ಅಧಿಕಾರಿಗಳಾದ ಮಂಜುಳಾ, ರಂಗಾರೆಡ್ಡಿ, ಮಲ್ಲಿಕಾರ್ಜುನ ಭಾವಿಕಟ್ಟಿ, ರವಿ ಸಜ್ಜನ್, ಬಸವರಾಜ ಕೋರೆಡ್ಡಿ, ಸಕ್ಕೂಬಾಯಿ ಬಸವರಾಜ ಆರೇರ್ ಇದ್ದರು.

# ಬರಪೀಡಿತ ಪ್ರದೇಶವೆಂದು ಘೋಷಿಸಲು ಜೆಡಿಎಸ್ ಒತ್ತಾಯ




**ಕೊಪ್ಪಳ:** 'ಶಾಸಕ ರಾಘವೇಂದ್ರ ಹಿಟ್ನಾಳ ಅವರಿಗೆ ಸಣ್ಣ ವಯಸ್ಸಿನಲ್ಲಿ ಅಧಿಕಾರ ಸಿಕ್ಕಿದೆ, ಸ್ಥಾನಮಾನ ಲಭಿಸಿದೆ. ಆದ್ದರಿಂದ ಅವರಿಗೆ ಜನರ ಕಷ್ಟಗೊತ್ತಿಲ್ಲ. ಅವರು ಈಗಿನಿಂತೆಯೇ ಕ್ಷೇತ್ರದಲ್ಲಿ ನಿರ್ಲಕ್ಷ್ಯ ಮುಂದುವರಿಸಿದರೆ ನಿರಂತರ ಹೋರಾಟ ಮಾಡಬೇಕಾಗುತ್ತದೆ. ಇದು ನಮ್ಮ ಪಕ್ಷದಿಂದ ನೀಡುತ್ತಿರುವ ಎಚ್ಚರಿಕೆ' ಎಂದು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿ.ವಿ. ಚಂದ್ರಶೇಖರ್ ಹೇಳಿದರು.

ಕೊಪ್ಪಳ ತಾಲ್ಲೂಕು ಬರಪೀಡಿತವೆಂದು ಘೋಷಿಸಲು ಒತ್ತಾಯಿಸಿ ಮಂಗಳವಾರ ಬೆಳಗಟ್ಟಿ ಗ್ರಾಮದಿಂದ ಆರಂಭವಾಗಿದ್ದ ಪಾದಯಾತ್ರೆ ಬುಧವಾರ ಮಧ್ಯಾಹ್ನ ನಾಲ್ಕು ಗಂಟೆ ಸುಮಾರಿಗೆ ಅಂದಾಜು 50 ಕಿ.ಮೀ. ಕ್ರಮಿಸಿ ಜಿಲ್ಲಾಡಳಿತ ಭವನ ತಲುಪಿತು. ಅಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು 'ರಾಜ್ಯದಲ್ಲಿ ಎಲ್ಲಿಯೇ ಬರಗಾಲ ಬಂದರೂ ತುಂಗಭದ್ರಾ ಜಲಾಶಯದ ಹಿನ್ನೀರಿನ ಪ್ರದೇಶವಾದ ಕೊಪ್ಪಳಕ್ಕೆ ಬರಬಾರದು. ಆದರೆ ಈಗ ಕ್ಷೇತ್ರದಲ್ಲಿ ಬರ ತಾಂಡವಾಗುತ್ತಿದೆ.

ಅಕ್ರಮ ಮರಳುಗಾರಿಕೆ ಶಾಸಕರಿಗೆ ಹೊಟ್ಟೆ ತುಂಬಿದೆ' ಎಂದು ಆರೋಪಿಸಿದರು.

ಪಾದಯಾತ್ರೆಯ ಮಾರ್ಗದುದ್ದಕ್ಕೂ ಜನ ನಮಗೆ ದೊಡ್ಡ ಮಟ್ಟದ ಅಭಿವೃದ್ಧಿ ಬೇಡ. ಕುಡಿಯಲು ನೀರು ಕೊಟ್ಟರೆ ಸಾಕು ಎಂದು ಗೋಗೆರಿದಿದ್ದಾರೆ. ಸಾರಾಯಿ ಬಂದ್ ಮಾಡಿಸಿ ಎಂದು ಕೈ ಮುಗಿದಿದ್ದಾರೆ. ಕ್ಷೇತ್ರದ ಗ್ರಾಮೀಣ ಭಾಗದ ರಸ್ತೆಗಳು ಹಾಳಾಗಿದ್ದರೂ ಶಾಸಕರು ಗಮನ ಹರಿಸಿಲ್ಲ ಎಂದು ದೂರಿದ್ದಾರೆ' ಎಂದು ಹೇಳಿದರು.

ಜಿಲ್ಲಾ ಒಬಿಸಿ ಘಟಕದ ಅಧ್ಯಕ್ಷ ಕರಿಯಪ್ಪ ಹಾಲವರ್ತಿ, ಯುವ ಘಟಕದ ಕಾರ್ಯಾಧ್ಯಕ್ಷ ರಾಜು ನಾಯಕ, ಜಿಲ್ಲಾ ಉಪಾಧ್ಯಕ್ಷ ಮೂರ್ತೆಪ್ಪ ಗಿಣಿಗೇರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣಪ್ಪ ಜಡಿ, ನಗರ ಘಟಕದ ಅಧ್ಯಕ್ಷ ಸೋಮನಗೌಡ ಹೊರಗನಾಳ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ಮರಳು ಮಾಫಿಯಾ; ಜಿಲ್ಲಾಧಿಕಾರಿ ಎದುರು ಕಣ್ಣೀರು

ಮನವಿ ಪತ್ರ ಸ್ವೀಕರಿಸಲು ಜಿಲ್ಲಾಧಿಕಾರಿ ಬಂದಾಗ ಹಿರೇಸಿಂಧೋಗಿ ಗ್ರಾಮದ ಸುಭಾಷರೆಡ್ಡಿ ಎಂಬುವರು 'ನಮ್ಮೂರಿನಲ್ಲಿ ಮರಳು ಮಾಫಿಯಾ ನೋಡಿ ಸಾಕಾಗಿ ಹೋಗಿದೆ. ದಯವಿಟ್ಟು ಕಡಿವಾಣ ಹಾಕಿ' ಎಂದು ಕೈ ಮುಗಿದ ಕಣ್ಣೀರು ಹಾಕಿದರು.

ಜಿಲ್ಲಾಧಿಕಾರಿ ಅವರ ಕಾಲುಮುಟ್ಟಿ ನಮಸ್ಕರಿಸಲು ಮುಂದಾದಾಗ 'ಹೀಗೆಲ್ಲ ಮಾಡಬಾರದು, ಅಧಿಕಾರಿಗಳಿಗೆ ಹೇಳಿ ಸಮಸ್ಯೆ ಪರಿಹರಿಸುವೆ' ಎಂದರು.

ಹಲವಾಗಲಿ ಗ್ರಾಮದಲ್ಲಿ ಕೆಲಸ ಸಿಗುತ್ತಿಲ್ಲ. ಮದ್ಯ ಮಾರಾಟ ವ್ಯಾಪಕವಾಗಿದೆ ಎಂದು ಮಹಿಳೆಯರು ಸಮಸ್ಯೆ ತೋಡಿಕೊಂಡರು. 'ನಿಮ್ಮ ವಿವರ ಕೊಡಿ ನಿಮ್ಮೂರಿನಲ್ಲಿಯೇ ವಿಬಿ–ಜಿರಾಮ್‌ಜಿಯಡಿ ಕೆಲಸ ಕೊಡಿಸುವೆ' ಎಂದರು.

# ಹಿಂದಿ ಜಗತ್ತಿನಲ್ಲಿ ಹೆಚ್ಚು ಬಳಕೆಯಲ್ಲಿರುವ ಮೂರನೇ ಭಾಷೆ



**ಕನಕಗಿರಿ:** 'ಹಿಂದಿ ದೇಶದ ಬಹುಜನರು ಮಾತನಾಡುವ ಭಾಷೆಯಾಗಿದ್ದು, ಜಗತ್ತಿನಲ್ಲಿ ಅತಿ ಹೆಚ್ಚು ಬಳಕೆಯಲ್ಲಿರುವ ಮೂರನೆಯ ಭಾಷೆಯಾಗಿದೆ' ಎಂದು ಉಪ ಪ್ರಾಂಶುಪಾಲ ಜಗದೀಶ ಹಾದಿಮನಿ ಹೇಳಿದರು.

ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಲಭವನ ಸಮಿತಿ, ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಶುಕ್ರವಾರ ನಡೆದ ಮಕ್ಕಳ ಕಲಾ ಪ್ರತಿಭಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಕಿ ಬೀಬಿ ಉಮೆ ಸಲಾಂ, ಬಾಲಭವನ ಕಾರ್ಯಕ್ರಮದ ಸಂಯೋಜಕಿ ಜ್ಯೋತಿ ಮಾತನಾಡಿದರು. ಇದೇ ಸಮಯದಲ್ಲಿ ರಾಷ್ಟ್ರೀಯ ಹಿಂದಿ ದಿವಸ ನಿಮಿತ್ತ ಮಕ್ಕಳ ಪ್ರತಿಭಾ ಆವಿಷ್ಕಾರ ಕಾರ್ಯಕ್ರಮ ನಡೆಯಿತು. ಹಿಂದಿ ಭಾಷೆಯ ಬಳಕೆ ಮತ್ತು ಅದರ ಅವಶ್ಯಕತೆಯ ಕುರಿತು ಪ್ರಬಂಧ, ಭಾಷಣ ಹಾಗೂ ಪ್ರಾಕೃತಿಕ ಚಿತ್ರಕಲಾ ಸ್ಪರ್ಧೆಯನ್ನು ನಡೆಸಿ, ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ಜಿಲ್ಲಾ ಬಾಲ ಭವನದ ವತಿಯಿಂದ ನೀಡಲಾಯಿತು. ಕಾರ್ಯಕ್ರಮದಲ್ಲಿ ಹಿಂದಿ ಭಾಷೆಯ ಬಳಕೆ–ಯ ಕುರಿತು ಮಕ್ಕಳು ಸಾಮೂಹಿಕ ನೃತ್ಯ ಪ್ರದರ್ಶಿಸಿದರು.

ಶಿಕ್ಷಕರಾದ ದೊಡ್ಡ ಬಸವನಗೌಡ ಪಾಟೀಲ, ರಾಜೇಶ್ವರರೆಡ್ಡಿ, ಶಾಮೀದಸಾಬ್, ಮೀನಾಕ್ಷಿ, ರಾಘವೇಂದ್ರ, ವಿಜೇಂದ್ರ, ತಿಪ್ಪೇ ರುದ್ರ ಆಚಾರ್ಯ ಹಾಗೂ ಜಿಲ್ಲಾ ಬಾಲಭವನ ಸಮಿತಿ ಕಚೇರಿ ಸಹಾಯಕಿ ರಾಜೇಶ್ವರಿ ಇದ್ದರು. ಯಮನೂರಪ್ಪ ಸ್ವಾಗತಿಸಿದರು. ಕನಕಾಚಲ ನಿರೂಪಿಸಿದರು. ತಾವರೆಪ್ಪ ವಂದಿಸಿದರು.

# ಗಂಗಾವತಿಯಲ್ಲಿ ಮತ್ತೆ ಜಾನುವಾರುಗಳ ಮೇಲೆ ಹುಲಿ ದಾಳಿ

**ಗಂಗಾವತಿ:** ತಾಲ್ಲೂಕಿನ ರಾಂಪುರ ಗ್ರಾಮ ಸಮೀಪದ ಲಕ್ಷ್ಮೀಪುರದ ತೆಂಬ ಭಾಗದಲ್ಲಿ ಕಳೆದ ಕೆಲ ದಿನಗಳಿಂದ ನಾಪತ್ತೆಯಾಗಿದ್ದ ಹುಲಿ ಮತ್ತೆ ಜಾನುವಾರುಗಳ ಮೇಲೆ ದಾಳಿ ನಡೆಸಿದ ಘಟನೆ ಈಚೆಗೆ ಬೆಳಕಿಗೆ ಬಂದಿದೆ.

ಹಲವು ದಶಕಗಳ ನಂತರ ಮೊದಲ ಬಾರಿಗೆ ತೆಂಬ ಭಾಗದಲ್ಲಿ ಆ.22ರಂದು ಜಾನುವಾರು ತಿನ್ನುತ್ತಿರುವ ದೃಶ್ಯಗಳು ಕ್ರಾಪ್ಟ್ ಕ್ಯಾಮರಾದಲ್ಲಿ ಕಂಡು ಬಂದಿತ್ತು. ನಂತರ ಅರಣ್ಯ ಇಲಾಖೆ ಅಧಿಕಾರಿಗಳು ಬಸಾಪುರ, ಮಲ್ಲಾಪುರ ಭಾಗದ ತೆಂಬ ಪ್ರದೇಶದಲ್ಲಿ ಒಟ್ಟು 38 ಕ್ರಾಪ್ಟ್ ಕ್ಯಾಮೆರಾ, ಬೋನ್ ಅಳವಡಿಸಿ, ಡ್ರೋನ್ ಕ್ಯಾಮರಾಗಳ ಮೂಲಕ ಹುಲಿ ಪತ್ತೆ ಕಾರ್ಯಾಚರಣೆ ನಡೆಸಿದರೂ, ಈ ಪ್ರಯತ್ನ ಸಫಲವಾಗಿರಲಿಲ್ಲ.

ಹುಲಿ ಕೆಲ ದಿನಗಳ ನಂತರ ಹೇಮಗುಡ್ಡ, ಸೆ.4ರಂದು ಚಿಕ್ಕ ಬೆಣಕಲ್ ಬಳಿ ಸಂಚಾರ ಮಾಡಿದ ಗುರುತುಗಳು ಕಂಡು ಬಂದಿದ್ದು ಬಿಟ್ಟರೆ, ಕ್ರಾಪ್ಟ್ ಕ್ಯಾಮೆರಾಗಳ ಕಣ್ಣಿಗೆ ಕಂಡಿರಲಿಲ್ಲ.

24 ದಿನ ಕಳೆದರೂ ಸಹ ಅರಣ್ಯ ಇಲಾಖೆ ಅಧಿಕಾರಿಗಳು ಹುಲಿ ಸೆರೆಹಿಡಿಯುವಲ್ಲಿ ಯಶಸ್ವಿಯಾಗಿಲ್ಲ.

ಜಾನುವಾರುಗಳ ಮೇಲೆ ಹುಲಿ ದಾಳಿ ಇನ್ನೂ ನಿಂತಿಲ್ಲ. ಇದಕ್ಕೆ ಸಾಕ್ಷಿ ಲಕ್ಷ್ಮೀಪುರದ ಬಳಿನ ಅರಣ್ಯ ಪ್ರದೇಶದಲ್ಲಿ 3 ಜಾನುವಾರಗಳ ಮೇಲೆ ಹುಲಿ ದಾಳಿ ನಡೆಸಿದೆ.

ಗುಡ್ಡಗಾಡು ಪ್ರಾಂತದ ಜಮೀನುಗಳಿಗೆ ತೆರಳಲು ಭಯವಾಗುತ್ತಿದೆ.

ಅರಣ್ಯ ಇಲಾಖೆ ಅಧಿಕಾರಿಗಳು ತಾವು ನಡೆಸುತ್ತಿರುವ ಕಾರ್ಯಾಚರಣೆ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು ಎಂದು ಮಲ್ಲಾಪುರ,

ಚಿಕ್ಕಬೆಣಕಲ್, ಹೇಮಗುಡ್ಡ, ಹಳೆ ಬಂಡಿ ಹರ್ಲಾಪುರ ಭಾಗದ ರೈತರು ಒತ್ತಾಯಿಸಿದ್ದಾರೆ.

# ಭಕ್ತಿಯಿಂದ ನಡೆದರೆ ಜೀವನದಲ್ಲಿ ಮುಕ್ತಿ ಸಾಧ್ಯ: ಅಭಿನವ ಚೆನ್ನಬಸವ ಶ್ರೀ



**ಮುದಗಲ್:** 'ಮಾನವ ತನ್ನನ್ನು ತಾನರಿತುಕೊಂಡು ಭಕ್ತಿ ಮಾರ್ಗದಲ್ಲಿ ನಡೆದರೆ, ಜೀವನದಲ್ಲಿ ಮುಕ್ತಿ ಕಾಣಲು ಸಾಧ್ಯವಿದೆ' ಎಂದು ನಂದವಾಡಗಿ ಅಭಿನವ ಚೆನ್ನಬಸವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಆರ್.ಕೆ. ನಗರದಲ್ಲಿ 5ನೇ ವರ್ಷದ ಗಣೇಶೋತ್ಸವದ ನಿಮಿತ್ತ ಹಮ್ಮಿಕೊಂಡಿದ್ದ ಜಾನಪದ ಸಂಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಾನಪದದಲ್ಲಿ ನಮ್ಮ ಬದುಕಿನ ಸತ್ವವೇ ಅಡಕಗೊಂಡಿದೆ. ನಮ್ಮ ಬದುಕು ಸಿಹಿಯಾಗಲು, ಇದರ ಹಿಂದೆ ಬಹಳ ಜನರ ತ್ಯಾಗದ ಕಹಿ ಅಡಗಿದೆ.

ಸಾಮಾಜಿಕ ಒಗ್ಗಟ್ಟು ಮತ್ತು ಸೌಹಾರ್ದತೆಯಿಂದ ಗಣೇಶ ಹಬ್ಬ ಆಚರಣೆ ಮಾಡಲಾಗುತ್ತಿದೆ. ದೇಶದ ಸಂಪ್ರದಾಯ, ಸಂಸ್ಕೃತಿ, ಪರಂಪರೆ ಉಳಿಸುವಂತ ಕೆಲಸ ಮಾಡಬೇಕು. ಗಣೇಶೋತ್ಸವ ಕಾರ್ಯಕ್ರಮ ಸಮಾಜದಲ್ಲಿ ಏಕತೆ, ಸೌಹಾರ್ದತೆ ಹಾಗೂ ಭಕ್ತಿಯ ಸಂದೇಶ ಸಾರುವ ಆಚರಣೆಯಾಗಿದೆ' ಎಂದರು.

ಕುಷ್ಟಗಿ ಜಾನಪದ ಕಲಾವಿದ ಜೀವನಸಾಬ ಬಿನ್ನಾಳೆಯವರ ಜಾನಪದ ವೈಭವದ ಕುರಿತ ಮಾತುಗಳು ನೆರೆದವರನ್ನ ನಗೆಗಡಲಲ್ಲಿ ತೇಲಿಸಿತು.

ನಾಗಲಪುರು ವಿಎಸ್‌ಎಸ್‌ಎನ್ ಅಧ್ಯಕ್ಷ ಶರಣಬಸವರಾಜ ಪಾಟೀಲ ವ್ಯಾಕರನಾಳ ಮಾತನಾಡಿದರು.

ನಗರಾಭಿವೃದ್ಧಿ ಅಧಿಕಾರಿ ಪರಶುರಾಮ ಕಟ್ಟಿಮನಿ, ಪರನಗೌಡ ಆದಾಪುರು, ಆರ್.ಕೆ. ನಗರ ಗಜಾನನ ಸಮಿತಿ ಸದಸ್ಯರು ಇದ್ದರು.

# ಮಾನವ ಪ್ರೀತಿ ತೋರುವ ವಚನ ಸಾಹಿತ್ಯ ಯಲಬುರ್ಗಾ ವಣಗೇರಿ ಗ್ರಾಮದಲ್ಲಿ ಕಾರ್ಯಕ್ರಮ



**ಯಲಬುರ್ಗಾ:** ತಾಲ್ಲೂಕಿನ ವಣಗೇರಿ ಗ್ರಾಮದಲ್ಲಿ ಗುರು ಬಸವ ಮಹಾಮನೆಯಲ್ಲಿ ಬಸವ ಪ್ರಿಯಾ ಕೂಡಲ ಚನ್ನಬಸವಣ್ಣವರ 12ನೇ ಮಾಸಿಕ ವಚನದರ್ಶನ ಚಿಂತನಾ ಕಾರ್ಯಕ್ರಮ ನಡೆಯಿತು.

ಕೊಪ್ಪಳದ ಗವೀಶ ಸಸಿಮಠ ಕಾರ್ಯಕ್ರಮಕ್ಕೆ ಚಾಲನೆ ನೀಡಿ, 'ವಚನ ಸಾಹಿತ್ಯವು ಸಮಾಜ ಸುಧಾರಣೆಗಾಗಿ, ಮಾನವೀಯ ಮೌಲ್ಯಗಳನ್ನು ಬೆಳೆಸುವುದಕ್ಕಾಗಿ ಹಾಗೂ ಸರಳ ಭಾಷೆಯಲ್ಲಿ ಮೂಡಿಬಂದ ಜನಕಲ್ಯಾಣ ಸಾಹಿತ್ಯವಾಗಿದೆ. ಇಂದಿಗೂ ಪ್ರಸ್ತುತವಾಗಿರುವ ವಚನ ಸಾಹಿತ್ಯದಿಂದಲೇ ಸಾಕಷ್ಟು ಸುಧಾರಣೆಗಳನ್ನು ಕಂಡುಕೊಳ್ಳಲಾಗಿದೆ' ಎಂದರು.

ಶರಣರ ವಿಚಾರಗಳು ಚಿಂತನೆಗಳು ಮನುಷ್ಯರ ನಡುವೆ ಪ್ರೀತಿಯನ್ನು ಹುಟ್ಟಿಸುತ್ತವೆ. ಮಾದರಿ ಜೀವನ ನಡೆಸುವಂತೆ ಪ್ರೇರಣೆ ನೀಡುತ್ತವೆ. ಮೂಢನಂಬಿಕೆಯನ್ನು ತ್ಯಜಿಸಿ ವಾಸ್ತುವ ಬದುಕನ್ನು ಕಟ್ಟಿಕೊಳ್ಳುವಂತೆ ಸಲಹೆ ನೀಡುತ್ತವೆ ಹೀಗೆ ಶರಣ–ರು ತಮ್ಮ ಅನುಭಾವದಿಂದ ರಚಿಸಿದ ವಚನಗಳು ಪ್ರತಿಯೊಬ್ಬರಿಗೂ ಸನ್ಮಾರ್ಗವನ್ನು ತೋರುತ್ತವೆ' ಎಂದರು.

ಮಕ್ಕಳ್ಳಿಯ ಶಿವಾನಂದಮಠದ ಶಿವಾನಂದ ಸ್ವಾಮೀಜಿ ಮಾತನಾಡಿ, ವಚನಸಾಹಿತ್ಯದಲ್ಲಿ ಚನ್ನಬಸವಣ್ಣನವರು ಸೇರಿದಂತೆ ಅನೇಕ ಶರಣರು ಈ ಪರಮ ಸುಖದ ಸ್ಥಿತಿಯನ್ನು ತಮ್ಮ ವಚನಗಳಲ್ಲಿ ಮನೋಜ್ಞವಾಗಿ ವಿವರಿಸಿದ್ದಾರೆ. ದೇಹ ವಾಹಸನ ಪ್ರಪಂಚವಾಸನ ಶಾಸ್ತ್ರ ವಾಸನ ಮರೆತು ನಿಷ್ಕ್ರಿಯಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸ್ಥಳೀಯ ಗಣ್ಯರು ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಹಬ್ಬ, ಉತ್ಸವಗಳು ಮನುಷ್ಯರನ್ನು ಒಗ್ಗೂಡಿಸುತ್ತವೆ: ಮಲ್ಲಯ್ಯ ಹಾಳ್ವಿ




**ಕಾರಟಗಿ:** 'ಹಬ್ಬ, ಉತ್ಸವಗಳು ಮನುಷ್ಯರನ್ನು ಒಂದು ಗೂಡಿಸುವುದಲ್ಲದೇ, ಮನಸ್ಸುಗಳನ್ನು ಬೆಸೆಯುತ್ತವೆ. ಜಾತಿ, ಮತ, ಧರ್ಮ ಮೀರಿ ಕೂಡಿ ಬದುಕುವ ಸಂದೇಶ ನೀಡುತ್ತವೆ. ಇದು ಭಾರತೀಯ ಹಬ್ಬಗಳ ಸಂಸ್ಕೃತಿಯ ಸಾರವಾಗಿದೆ' ಎಂದು ಗ್ರಾಪಂ ನಿವೃತ್ತ ಕಾರ್ಯದರ್ಶಿ ಮಲ್ಲಯ್ಯ ಹಾಳ್ವಿ ಹೇಳಿದರು.

ಪಟ್ಟಣದ ಸ್ಪಂದನ ಸಾಂಸ್ಕೃತಿಕ ಕಲಾ ಸಂಸ್ಥೆ, ಹಲಗೇರಿ ಸಂಸ್ಥೆ ವತಿಯಿಂದ ಗಣೇಶ ಚತುರ್ಥಿಯ ನಿಮಿತ್ತ ನಡೆದ ಜಾನಪದ ಗಾನ ಸಂಭ್ರಮ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಬ್ಬಗಳು ನಮ್ಮ ಭಾರತದ ಸಾಂಸ್ಕೃತಿಕ ಪ್ರತಿಬಿಂಬ. ಹಾಗಾಗಿ ಗೌರಿ–ಗಣೇಶ ಹಬ್ಬದ ನಿಮಿತ್ತ ಮೂಲ ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಜಾನಪದ ಗಾಯನ, ಭಜನಾ ಕಾರ್ಯಕ್ರಮ ಏರ್ಪಡಿಸಿರುವುದು ಸ್ಪಂದನ ಸಂಸ್ಥೆಯ ಶ್ಲಾಘನೀಯ ಕಾರ್ಯ' ಎಂದರು.


ಅಲೆಮಾರಿ, ಅರೆಅಲೆಮಾರಿ ರಾಜ್ಯ ಸಂಘಟನೆ ಉಪಾಧ್ಯಕ್ಷ ಶ್ರೀನಿವಾಸ್ ಬೈಲಪತ್ತಾರ್ ಮಾತನಾಡಿ, 'ಸ್ಪಂದನ ಸಂಸ್ಥೆಯು ಧಾರ್ಮಿಕ ಹಬ್ಬಗಳಲ್ಲಿಯೂ ಮೂಲ ಜಾನಪದ ಕಲೆಗಳನ್ನು ಉಳಿಸುವ ನಿಟ್ಟಿನಲ್ಲಿ ವಿವಿಧ ಜಾನಪದ ಗಾಯಕ–ಕಲಾವಿದರಿಂದ ಕಾರ್ಯಕ್ರಮ ಆಯೋಜಿಸಿ, ಇತರರಿಗೆ ಮಾದರಿಯಾಗಿದ್ದಾರೆ' ಎಂದರು.

ಸ್ಪಂದನ ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷ ಕೊಟ್ರಗೌಡ ಪಾಟೀಲ, ಸ್ಪಂದನ ಸಂಸ್ಥೆಯ ಸಂಚಾಲಕ ರಮೇಶ ಬನ್ನಿಕೊಪ್ಪ, ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಅಲಿ ಹುಸೇನ್, ಕರ್ನಾಟಕ

ಜಾನಪದ ಅಕಾಡೆಮಿ ಸದಸ್ಯ ಮಹಿಬೂಬ ಕಿಲ್ಲೇದಾರ್, ಚಂದ್ರಶೇಖರಯ್ಯ ಹಿರೇಮಠ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕಾಧ್ಯಕ್ಷ ಶರಣಪ್ಪ ಕೋಟ್ಯಾಳ, ಪತ್ರಕರ್ತ ಟಿ.ಉಮೇಶ್, ಶಿಕ್ಷಕ ಶಿವರಾಜಕುಮಾರ್, ಗುರುರಾಜ ಶ್ರೇಷ್ಠಿ ಇದ್ದರು.

ಶಿಕ್ಷಕ ವೀರಪ್ಪ, ಮಹೇಶ ಮರ್ಲಾನಹಳ್ಳಿ, ಷಕ್ಷಾವಲಿ ಮರ್ಲಾನಹಳ್ಳಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಿಬ್ಬಂದಿ ವಿಜಯಲಕ್ಷ್ಮೀ ಬನ್ನಿಕೊಪ್ಪ ಕಾರ್ಯಕ್ರಮ ನಿರ್ವಹಿಸಿದರು.

# ವಕೀಲರ ಸಂಘದ ಉಪಾಧ್ಯಕ್ಷ ಮಾಲಿಪಾಟೀಲ್‌ಗೆ ವಿಶೇಷ ಸನ್ಮಾನ



**ಕೊಪ್ಪಳ:** ಜಿಲ್ಲಾ ವಕೀಲರ ಸಂಘದ ನೂತನ ಜಿಲ್ಲಾ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ನ್ಯಾಯವಾದಿ ಎ.ಎಸ್. ಮಾಲಿಪಾಟೀಲ್ ಅವರಿಗೆ 'ಕರುನಾಡ ಚೇತನ' ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು. ಇತ್ತೀಚೆಗೆ ನಡೆದ ಸಮಾರಂಭವೊಂದರಲ್ಲಿ ಕಾರಣಾಂತರಗಳಿಂದ ಅನುಪಸ್ಥಿತರಾಗಿದ್ದ ಹಿನ್ನೆಲೆಯಲ್ಲಿ, ಅವರ ಕಚೇರಿ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪ್ರಕಾಶ್ ಆನಂದ ಹಳ್ಳಿಯವರ ನೇತೃತ್ವದಲ್ಲಿ ಮಾಲಿಪಾಟೀಲ್ ಅವರನ್ನು ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ 'ವಿಶಾಲ ಪ್ರಕಾಶನ'ದ ಪ್ರಕಾಶಕ ಹಾಗೂ ಹಿರಿಯ ಪತ್ರಕರ್ತ ಜಿ.ಎಸ್. ಗೋನಾಳ, ಹಿರಿಯ ಪತ್ರಕರ್ತ ಎಂ. ಸಾಧಿಕ್ ಅಲಿ, ಕೆಡಬ್ಲ್ಯುಜೆ ಜಿಲ್ಲಾ ಖಜಾಂಚಿ ಫಕೀರಪ್ಪ ಗೋತೂರ, ಹಿರಿಯ ನ್ಯಾಯವಾದಿ ಬಿ. ಶರಣಪ್ಪ, ಯುವ ನ್ಯಾಯವಾದಿಗಳಾದ ಅಂಜುಮನ್ ಎಸ್.ಎಂ., ಸೋಮರಾಜ್ ರೆಡ್ಡಿ ಗೋನಾಳ,

ನಿಂಗಪ್ಪ ಮಜ್ಜಗಿ, ಕಚೇರಿ ಸಹಾಯಕ ಮಂಜುನಾಥ್ ಸೇರಿದಂತೆ ಸಂಘದ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

# ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿ ಅಗತ್ಯ




**ಕೊಪ್ಪಳ:** ಕುಟುಂಬದ ಆರ್ಥಿಕ ಅಭಿವೃದ್ಧಿಗೆ ಮಹಿಳೆಯರ ಆರ್ಥಿಕ ಸಬಲೀಕರಣ ಅತ್ಯಂತ ಮುಖ್ಯವಾಗಿದ್ದು, ಮಹಿಳೆಯರು ಕೌಶಲ್ಯಾಭಿವೃದ್ಧಿ ತರಬೇತಿ ಶಿಬಿರಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೊಪ್ಪಳ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಮೀನಾಕ್ಷಿ ಬಣ್ಣದ ಭಾವಿ ಹೇಳಿದರು.

ಕೊಪ್ಪಳ ಇನ್ನರ್ ವೀಲ್ ಕ್ಲಬ್ ಪದಾಧಿಕಾರಿಗಳು

ಹಾಗೂ ಸದಸ್ಯರ ತಂಡದೊಂದಿಗೆ ಕೌಶಲ್ಯಾಭಿವೃದ್ಧಿ ಯೋಜನೆಯಡಿ ನಡೆಯುತ್ತಿರುವ ತರಬೇತಿ ಕೇಂದ್ರಕ್ಕೆ ಭೇಟಿ ನೀಡಿ, ತರಬೇತಿ ಕಾರ್ಯವನ್ನು ವೀಕ್ಷಿಸಿ ಅವರು ಮಾತನಾಡಿದರು.

ಮಗ್ಗದ ಕೆಲಸ ಹಾಗೂ ಡಿಸೈನರ್ ಬ್ಲೌಸ್ ಎಂಬ್ರಾಯ್ಡರಿ ತರಬೇತಿ ಶಿಬಿರದ ಸದುಪಯೋಗವನ್ನು ಮಹಿಳೆಯರು ಪಡೆದುಕೊಳ್ಳಬೇಕು. ತರಬೇತಿ ಮೂಲಕ ಕೌಶಲ್ಯ ಗಳಿಸಿ ಸ್ವಯಂ ಉದ್ಯೋಗ ಕೈಗೊಳ್ಳುವುದರಿಂದ ಆರ್ಥಿಕ ಸ್ವಾವಲಂಬನೆ ಸಾಧಿಸಲು ಸಾಧ್ಯವಾಗುತ್ತದೆ. ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಇಂತಹ ತರಬೇತಿಗಳು ಪ್ರೋತ್ಸಾಹದಾಯಕವಾಗಿವೆ ಎಂದರು.

ಈ ಸಂದರ್ಭದಲ್ಲಿ ತರಬೇತಿದಾರರನ್ನು ಕ್ಲಬ್ ಪರವಾಗಿ ಸನ್ಮಾನಿಸಿ ಶುಭಹಾರೈಸಲಾಯಿತು. ಕ್ಲಬ್ ಕಾರ್ಯದರ್ಶಿ ಶ್ರೀದೇವಿ ಪಾಟೀಲ್, ಎಲ್‌ಎಸ್‌ಒ ಲತಾ ಪಟ್ಟಣಶೆಟ್ಟಿ, ಖಜಾಂಚಿ ಶಿಲ್ಪಾ ರಾಜು ಶಶಿಮಠ, ಕಾರ್ಯಕಾರಿ ಸಮಿತಿ ಸದಸ್ಯೆ ಶರಣಮ್ಮ ಪಾಟೀಲ್, ಹಿರಿಯ ಸದಸ್ಯೆ ಡಾ. ರಾಧಾ ಕುಲಕರ್ಣಿ ಸೇರಿದಂತೆ ಕಾರ್ಯಕರ್ತರು, ಅಭಿಮಾನಿಗಳು, ಮಹಿಳಾ ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು.

# ಬರ ಘೋಷಣೆಗೆ ಆಗ್ರಹ: ಸಚಿವ ರಾಯರೆಡ್ಡಿ ವಿರುದ್ಧ ಬಿಜೆಪಿ ಸಮರಶಂಖ




**ಯಲಬುರ್ಗಾ:** ತಾಲೂಕಿನಲ್ಲಿ ಮುಂಗಾರು ಹಾಗೂ ಹಿಂಗಾರು ಮಳೆ ಕೈಕೊಟ್ಟಿರುವುದರಿಂದ ರೈತರು ಹಾಗೂ ಬಡ ಕೂಲಿ ಕಾರ್ಮಿಕ ಕುಟುಂಬಗಳು ಜೀವನ ನಿರ್ವಹಣೆಗೆ ಸಂಕಷ್ಟ ಅನುಭವಿಸುತ್ತಿವೆ. ಇಂತಹ ಗಂಭೀರ ಪರಿಸ್ಥಿತಿಯಲ್ಲಿಯೂ ಯಲಬುರ್ಗಾ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸುವಲ್ಲಿ ಸಚಿವ ಬಸವರಾಜ ರಾಯರೆಡ್ಡಿ ವಿಫಲರಾಗಿದ್ದಾರೆ ಎಂದು ಬಿಜೆಪಿ ಮಂಡಲ ಅಧ್ಯಕ್ಷ ಮಾರುತಿ ಗಾವರಾಳ ಆರೋಪಿಸಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿಯಲ್ಲಿಯೂ ಯಲಬುರ್ಗಾ ತಾಲೂಕನ್ನು ಸೇರಿಸದಿರುವುದು ಸಚಿವರ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಟೀಕಿಸಿದರು.

ಅಭಿವೃದ್ಧಿ ಹೆಸರಿನಲ್ಲಿ ಅನಗತ್ಯ ಕಾಮಗಾರಿಗಳಿಗೆ ಸರ್ಕಾರದ ಹಣ ವ್ಯಯಿಸಲಾಗುತ್ತಿದೆ.

ಆದರೆ ಬರದಿಂದ ಸಂಕಷ್ಟದಲ್ಲಿರುವ ರೈತರು ಹಾಗೂ ಕೂಲಿಕಾರ್ಮಿಕರಿಗೆ ಅಗತ್ಯ ಪರಿಹಾರ ಕ್ರಮಗಳಿಗೆ ಆದ್ಯತೆ ನೀಡುತ್ತಿಲ್ಲ ಎಂದು ಆರೋಪಿಸಿದರು. ಜನರ ಸಮಸ್ಯೆಗಳನ್ನು ಹೇಳಿಕೊಳ್ಳಲು ನಡೆಯುವ ಜನಸ್ಪಂದನ ಸಭೆಗಳಲ್ಲಿ ಸಚಿವರು ಜನರಿಗೆ ಬೆದರಿಕೆ ಹಾಕುತ್ತಿದ್ದಾರೆ ಎಂಬ ಆರೋಪವನ್ನೂ ಮಾಡಿದರು.

ಬಿಜೆಪಿ ಮುಖಂಡ ವೀರಣ್ಣ ಹುಬ್ಬಳ್ಳಿ ಮಾತನಾಡಿ, ಸೆ.18ರಂದು ಯಲಬುರ್ಗಾ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಒತ್ತಾಯಿಸಿ ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು. ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸದಿದ್ದರೆ ಪ್ರತಿ ಗ್ರಾಮದಲ್ಲಿಯೂ ಸಚಿವರ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ರತ್ನ ದೇಶಾಯಿ, ಬಸವರಾಜ ರಾಜೂರು, ವಿಶ್ವನಾಥ ಮರಿಬಸಪ್ಪನವರ್, ಶರಣಪ್ಪ ಈಳಿಗೇರ್, ಶಿವಕುಮಾರ ನಾಗಲಾಪೂರಮಠ, ಶಂಭು ಜೋಳದ, ಅಮರೇಶ ಹುಬ್ಬಳ್ಳಿ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬೆಳಗಾವಿ 3 ತಾಲೂಕು ಬಿಟ್ಟರೆ ಉಳಿದ ಎಲ್ಲ ತಾಲೂಕು ಬರ ಪೀಡಿತ ಪಟ್ಟಿಗೆ ಸೇರುತ್ತವೆ: ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಭರವಸೆ



**ಬೆಳಗಾವಿ:**"ಇಷ್ಟು ಮಳೆ ಕಡಿಮೆ ಆದರೆ ಮಾತ್ರ ಬರ ಪೀಡಿತ ಅಂತಾ ಘೋಷಣೆ ಮಾಡುವ ಮಾನದಂಡಗಳಿವೆ. ನಿಯಮಗಳಲ್ಲಿ ಬರುವುದಿಲ್ಲ ಅಂತಾ ಒಂದಯ ತಿಂಗಳ ಹಿಂದೆ ಹೇಳಿದ್ದರು.

ಆದರೆ, ಈಗ ಮಳೆ ಆಗುತ್ತಿಲ್ಲ. ಹಾಗಾಗಿ, ಬೆಳಗಾವಿ ಜಿಲ್ಲೆಯ ಎರಡ್ಮೂರು ತಾಲೂಕು ಬಿಟ್ಟರೆ ಎಲ್ಲಾ ತಾಲೂಕುಗಳು ಬರ ಪೀಡಿತ ಪಟ್ಟಿಯಲ್ಲಿ ಸ್ಥಾನ ಪಡೆಯಲಿವೆ" ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಸುವರ್ಣ ವಿಧಾನಸೌಧದಲ್ಲಿ ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಗಾರು ಮಳೆ ಕೊರತೆಯಿಂದ ಬೈಲಹೊಂಗಲ, ಬೆಳಗಾವಿ, ಸವದತ್ತಿ ಹಾಗೂ ಮೂಡಲಗಿ ತಾಲೂಕುಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಸತತ ಮೂರು ವಾರದಿಂದ ಶೇ. 50ಕ್ಕಿಂತ ಕಡಿಮೆ ಮಳೆಯಾದಲ್ಲಿ, ಅಂಥ ಪ್ರದೇಶಗಳನ್ನು ಬರಪೀಡಿತವೆಂದು ಘೋಷಿಸಲು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು.

ಯರಗಟ್ಟಿ, ಸವದತ್ತಿ ಹಾಗೂ ರಾಮದುರ್ಗ ತಾಲೂಕುಗಳಲ್ಲಿ ಉದ್ದು ಮತ್ತು ಹೆಸರು ಬೆಳೆಗಳಿಗೆ ಉಂಟಾಗಿರುವ ಹಾನಿಗೆ ಎನ್‌ಡಿಆರ್‌ಎಫ್ ಮಾನದಂಡಗಳ ಪ್ರಕಾರ ರೈತರಿಗೆ ಬೆಳೆ ಪರಿಹಾರ ಕೊಡಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು ಪೂ-ರೈಕೆ, ಬೆಳೆ ವಿಮೆ, ನೀರಾವರಿ, ಜಾನುವಾರುಗಳಿಗೆ ಮೇವು ಸಂಗ್ರಹಣೆಗೆ ಅಧಿಕಾರಿಗಳು ಮುನ್ನೆಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಮಳೆ ಕೊರತೆಯಿಂದ ಬೆಳೆ ಹಾನಿಯಾದ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಅರ್ಹ ರೈತರಿಗೆ ನಿಯಮಾನುಸಾರ ಪರಿಹಾರ ಒದಗಿಸಬೇಕು. ಇನ್ನು ಜಿಲ್ಲೆಯಲ್ಲಿನ ಜಲಾಶಯಗಳಲ್ಲಿ ಸಂಗ್ರಹವಿರುವ ನೀರನ್ನು ಕುಡಿಯಲು ಮೊದಲು ಆದ್ಯತೆ ನೀಡಿ ಅಗತ್ಯಗನುಗುಣವಾಗಿ ಬಿಡುಗಡೆ ಮಾಡಬೇಕು. ಮುಂದಿನ ಜೂನ್‌ವರೆಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕಿದೆ.

ಈ ಕುರಿತು ಕೃಷಿ, ಕಂದಾಯ, ನೀರಾವರಿ, ತೋಟಗಾರಿಕೆ ಹಾಗೂ ಹೆಸ್ಕಾಂ ಇಲಾಖೆಗಳನ್ನೊಳಗೊಂಡ ತಂಡವನ್ನು ರಚಿಸಿ ಸಮೀಕ್ಷೆ ನಡೆಸಬೇಕು.

ಸಮೀಕ್ಷಾ ವರದಿ ಆಧಾರದ ಮೇಲೆ ನೀರಿನ ಅವಶ್ಯಕತೆ ಗುರುತಿಸಿ, ಅಗತ್ಯವಿರುವ ಪ್ರದೇಶಗಳಿಗೆನೀರುಬಿಡುಗಡೆಮಾಡಬೇಕು.

ಇದೇ ಮಾದರಿಯಲ್ಲಿ ಗದಗ, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿಯೂ ನಾನಾ ಇಲಾಖೆಗಳನ್ನೊಳಗೊಂಡ ತಂಡ ರಚಿಸಿ ಸಮೀಕ್ಷೆ ನಡೆಸಿ ವರದಿ ಪಡೆಯುವಂತೆ ಸೂಚಿಸಿದರು. ಜಿಲ್ಲಾಕಾರಿ ಮೊಹಮ್ಮದ್ ರೋಷನ್ ಮಾತನಾಡಿ, "ಘಟಪ್ರಭಾ, ಕೃಷ್ಣಾ ಹಾಗೂ ಮಲಪ್ರಭಾ ನದಿಗಳ ನೀರಿನ ಮಟ್ಟವನ್ನು ನಿರಂತರವಾಗಿ ಪರಿಶೀಲಿಸಲಾಗುತ್ತಿದೆ. ಹಿಡಕಲ್ ಜಲಾಶಯದಲ್ಲಿ ಸದ್ಯ ನೀರಿನ ಮಟ್ಟ ಕಡಿಮೆಯಾಗಿಲ್ಲ. ರೈತರಿಗೆ ನೀರು ಬಿಡುಗಡೆ ಹಾಗೂ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ಕೊರತೆ ಆಗುವುದಿಲ್ಲ. ಆದರೆ, ಮಲಪ್ರಭಾ ಜಲಾಶಯದಿಂದ ಗದಗ, ನವಲಗುಂದ ಹಾಗೂ ಸವದತ್ತಿ ಸೇರಿದಂತೆ ನಾನಾ ಪ್ರದೇಶಗಳಿಗೆ ನೀರು ಬಿಡುಗಡೆ ಮಾಡುವಲ್ಲಿ ಸಮಸ್ಯೆ ಎದುರಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಸಲಹಾ ಸಮಿತಿ ಸಭೆ ಕರೆದು ನೀರು ಬಿಡುಗಡೆಗೆ ಚರ್ಚೆ ಮಾಡಲಾಗುವುದು" ಎಂದು ಹೇಳಿದರು.

ಜಿಪಂ ಸಿಇಒ ರಾಹುಲ್ ಶಿಂಧೆ ಮಾತನಾಡಿ, "ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಮೃತನಗರ ಯೋಜನೆ, ವಿಬಿ – ಜಿ ರಾಮ್ ಜಿ ಹಾಗೂ ಸಣ್ಣ ಮತ್ತು ಮಧ್ಯಮ ನೀರಾವರಿ ಯೋಜನೆಗಳಡಿ ವಿವಿಧ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು,ಜಿಲ್ಲೆಯಲ್ಲಿ ಕೆರೆಗಳನ್ನು ಅಭಿವೃದ್ಧಿಪಡಿಸುವ ಕೆಲಸವಾಗುತ್ತಿದೆ.

ಕುಡಿಯುವ ನೀರು ಪೂರೈಕೆಗೆ ಯಾವುದೇ ಸಮಸ್ಯೆ ಇಲ್ಲ. ನಿಪ್ಪಾಣಿ ಹಾಗೂ ಅಥಣಿ ಭಾಗಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾದಲ್ಲಿ, ಅಂಥ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತದೆ" ಎಂದರು. ಬೇಕಾಬಿಟ್ಟಿ ಅನುದಾನ ಹಂಚಿಕೆ ಆರೋಪ: ಶಾಸಕ ಆಸೀಫ್ ಸೇಠ್ ಮಾತನಾಡಿ, "ಅನುದಾನ ಬಳಕೆ ಮಾಡುವಾಗ ಶಾಸಕರ ಗಮನಕ್ಕೆ ತರಬೇಕು. ಆದರೆ, ಅಧಿಕಾರಿಗಳು ಬೇಕಾಬಿಟ್ಟಿಯಾಗಿ ಅನುದಾನ ಹಂಚಿಕೆ ಮಾಡಿದ್ದರಿಂದ ನಗರದಲ್ಲಿ ಹಲವಾರು ಸಮಸ್ಯೆಗಳು ಎದುರಾಗಿವೆ" ಎಂದು ಬೇಸರ ಹೊರ ಹಾಕಿದರು.

ಇದಕ್ಕೆ ಸಹಮತ ವ್ಯಕ್ತಪಡಿಸಿದ ಸತೀಶ ಜಾರಕಿಹೊಳಿ, "ಅನುದಾನ ಬಳಕೆ ಮಾಡುವಲ್ಲಿ ಶಾಸಕರ ಗಮನಕ್ಕೆ ತಂದು, ಅವರೊಂದಿಗೆ ಸಮನ್ವಯ ಸಾಧಿಸಿಯೇ ಕಾಮಗಾರಿ ಕೈಗೊಳ್ಳಬೇಕು. ರಸ್ತೆ ಗುಂಡಿ ಮುಚ್ಚುವಿಕೆ ಹಾಗೂ ದುರಸ್ತಿ ಕಾರ್ಯಗಳಿಗೆ ಆದ್ಯತೆ ನೀಡಬೇಕೇ ಹೊರತು, ಅನುದಾನವನ್ನು ವಾರ್ಡ್‌ಗಳಿಗೆ ಹಂಚಿಕೆ ಮಾಡಬಾರದು. ರಸ್ತೆ ಗುಂಡಿಗಳ ಸಮಸ್ಯೆ ಇರುವ ಪ್ರದೇಶಗಳನ್ನು ಗುರುತಿಸಿ, ತುರ್ತು ಅವಶ್ಯಕತೆಗೆ ಆದ್ಯತೆ ನೀಡಿ.

ಎಲ್ಲೆಲ್ಲಿರಸ್ತೆಗುಂಡಿಗಳನ್ನುಮುಚ್ಚಲಾಗುತ್ತಿದೆ, ಯಾವ ಕಾಮಗಾರಿಗೆ ಎಷ್ಟು ಅನುದಾನ ಬಳಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಬೇಕು. ಪಾಲಿಕೆ ಪರಿಷತ್ ಸಭೆಯ ಹೆಸರಿನಲ್ಲಿ ಬೇಕಾಬಿಟ್ಟಿಯಾಗಿ ಅನುದಾನ ಬಳಕೆ ಮಾಡುವಂತಿಲ್ಲ" ಎಂದು ಅಧಿಕಾರಿಗಳಿಗೆ ಎಚ್ಚರಿಸಿದರು.

ಸೋಯಾಬಿನ್ ಸಮೀಕ್ಷೆ ನಡೆಸಿ: ಶಾಸಕ ಮಹಾಂತೇಶ ಕೌಜಲಗಿ ಮಾತನಾಡಿ, "ಬೈಲಹೊಂಗಲ ತಾಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸೋಯಾಬಿನ್ ಬೆಳೆಯಲಾಗಿದೆ. ಇತ್ತೀಚೆಗೆ ಮಳೆ ಕೊರತೆಯಿಂದ ಇಳುವರಿ ಕಡಿಮೆಯಾಗುವ ಆತಂಕ ಎದುರಾಗಿದೆ. ಜೊತೆಗೆ ಸೋಯಾಬಿನ್ ಬೆಳೆಯ ಅವಧಿ ಈಗಾಗಲೇ ಮುಕ್ತಾಯದ ಹಂತದಲ್ಲಿರುವುದರಿಂದ ಕೂಡಲೇ ಬೆಳೆ ಸಮೀಕ್ಷೆ ನಡೆಸಬೇಕು.

ಸಮೀಕ್ಷೆಯ ಆಧಾರದ ಮೇಲೆ ವಿಮಾ ಪಾವತಿಗೆಅಗತ್ಯವರದಿಯನ್ನುಸಲ್ಲಿಸುವಂತೆ ಅಧಿಕಾರಿಗಳಿಗೆ" ಸೂಚಿಸಿದರು.

ಕೆರೆ ತುಂಬಿಸಲು ನೀರು ಬಿಡಿ: ಶಾಸಕ ವಿಶ್ವಾಸ್ ವೈದ್ಯ ಅವರು ಮಾತನಾಡಿ, "ಮಲಪ್ರಭಾ ಅಣೆಕಟ್ಟಿನಿಂದ ಸವದತ್ತಿ ಭಾಗದ ಕೆರೆಗಳನ್ನು ತುಂಬಿಸಲು ಅಗತ್ಯ ಪ್ರಮಾಣದ ನೀರು ಬಿಡುಗಡೆ ಮಾಡುವಂತೆ ಮನವಿ ಮಾಡಿದರು.

ಅಲ್ಲದೇ, ಯರಗಟ್ಟಿ ಭಾಗದಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಅಮೃತ್ ಯೋಜನೆಯಡಿ ಹೆಚ್ಚುವರಿ ಅನುದಾನದ ಅಗತ್ಯವಿದೆ" ಎಂದ ಅವರು ಬಿಡುಗಡೆಗೆ ಮಾಡುವಂತೆ ಒತ್ತಾಯಿಸಿದರು.

ವಿಧಾನ ಪರಿಷತ್ ಸದಸ್ಯ ನಾಗರಾಜ ಯಾದವ ಮಾತನಾಡಿ, ಬೆಳಗಾವಿ ನಗರದಲ್ಲಿ ಎಲ್ & ಟಿ ಸಂಸ್ಥೆಯ ವತಿಯಿಂದ ಕೈಗೊಳ್ಳಲಾಗುತ್ತಿರುವ ಕುಡಿಯುವ ನೀರಿನ ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗುತ್ತಿರುವ ಕುರಿತು ಸಭೆಯ ಗಮನಕ್ಕೆ ತಂದರು.ಕಾಮಗಾರಿಗಳನ್ನುತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಶಾಸಕರಾದ ದುರ್ಯೋಧನ ಐಹೊಳೆ, ಬಾಬಾಸಾಹೇಬ ಪಾಟೀಲ, ಹೆಸ್ಕಾಂ ಅಧ್ಯಕ್ಷ ಸಯ್ಯದ ಅಜ್ಜಂಪೀರ ಖಾದ್ರಿ, ನಗರ ಪೊಲೀಸ್ ಆಯುಕ್ತ ಪ್ರಕಾಶ ನಿಕ್ಕಂ, ಎಸ್ಪಿ ರಾಮರಾಜನ್ ಕೆ. ಸೇರಿ ಮತ್ತಿತರರು ಇದ್ದರು. ಕೆಡಿಪಿ ಸಭೆಗೆ ಗೈರಾದ 13 ಶಾಸಕರು: ಜಿಲ್ಲೆಯ 18 ಶಾಸಕರ ಪೈಕಿ ಕೆಡಿಪಿ ಸಭೆಯಲ್ಲಿ ಶಾಸಕರಾದ ಮಹಾಂತೇಶ ಕೌಜಲಗಿ, ಬಾಬಾಸಾಹೇಬ ಪಾಟೀಲ, ಆಸೀಫ್ ಸೇಠ್, ವಿಶ್ವಾಸ ವೈದ್ಯ, ದುರ್ಯೋಧನ ಐಹೊಳೆ, ವಿಧಾನ ಪರಿಷತ್? ಸದಸ್ಯ ನಾಗರಾಜ್‌ಯಾಧವ್ ಮಾತ್ರ ಭಾ-ಗಿಯಾಗಿದ್ದರು. ಸಚಿವ ಲಕ್ಷ್ಮಣ ಸವದಿ, ಶಾಸಕರಾದ ಲಕ್ಷ್ಮಿ ಹೆಬ್ಬಾಳ್ಕರ್, ರಮೇಶ ಜಾರಕಿಹೊಳಿ, ಬಾಲಚಂದ್ರ ಜಾರಕಿಹೊಳಿ, ನಿಖಿಲ್ ಕತ್ತಿ, ಶಶಿಕಲಾ ಜೊಲ್ಲೆ, ಅಶೋಕ ಪಟ್ಟಣ, ವಿಠ್ಠಲ ಹಲಗೇಕರ್, ಮಹೇಂದ್ರ ತಮ್ಮನ್ನವರ, ಅಭಯ್ ಪಾಟೀಲ, ರಾಜು ಕಾಗೆ, ಗಣೇಶ ಹುಕ್ಕೇರಿ ಗೈರಾಗಿದ್ದರು.

ಅಲ್ಲದೇ ಸಂಸದರಾದ ಜಗದೀಶ್ ಶೆಟ್ಟರ್, ಪ್ರಿಯಾಂಕಾ ಜಾರಕಿಹೊಳಿ, ವಿಧಾನಪರಿಷತ್ ಸದಸ್ಯರಾದ ಪ್ರಕಾಶ ಹುಕ್ಕೇರಿ, ಚೆನ್ನರಾಜ್ ಹಟ್ಟಿಹೊಳಿ, ಹನುಮಂತ ನಿರಾಣಿ ಸಹ ಗೈರಾಗಿದ್ದರು. ಕೆಡಿಪಿ ಸಭೆಯಲ್ಲಿ ಪಾಲ್ಗೊಂಡು ಜಿಲ್ಲೆ ಮತ್ತು ತಮ್ಮ ಕ್ಷೇತ್ರದ ಜನರ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತದೇ ಇರುವುದು ಎದ್ದು ಕಾಣಿಸಿತು.

# ಬೆಳಗಾವಿ ಬೆಂಕಿ ಅವಘಡ; ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ತಂದೆ:ಮಗ ಕೂಡ ಸಾವು: ಇಡೀ ಕುಟುಂಬ ದುರಂತ ಅಂತ್ಯ!



**ಬೆಳಗಾವಿ:** ಇಲ್ಲಿನ ಚವ್ಹಾಟ ಗಲ್ಲಿಯಲ್ಲಿ ಮಂಗಳವಾರ ಮಧ್ಯರಾತ್ರಿ ಸಂಭವಿಸಿದ್ದ ಬೆಂಕಿ ಅವಘಡದಲ್ಲಿ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ತಂದೆ-ಮಗ ಕೂಡ ಚಿಕಿತ್ಸೆ ಫಲಕಾರಿ ಆಗದೇ ಬುಧವಾರ ಮಧ್ಯಾಹ್ನ ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ಈ ಮೂಲಕ ಮನೆಯವರೆಲ್ಲಾ ದುರಂತ ಅಂತ್ಯ ಕಂಡಿದ್ದಾರೆ.

ಗಜಾನನ ರಾಜಾರಾಮ ಧಮೋಣೆ(65), ರೋಷನ್ ಗಜಾನನ ಧಮೋಣೆ(21) ಮೃತರು. ನಿನ್ನೆಯೇ ಗಜಾನನ ಅವರ ಪತ್ನಿ ಶಾರದಾ ಧಮೋಣೆ(48), ಸಹೋದರಿ ಭಾರತಿ ಧಮೋಣೆ(45), ಪುತ್ರಿಯರಾದ ಪ್ರಿಯಾ ಧಮೋಣೆ (28) ಹಾಗೂ ಗಂಗಾ ಧಮೋಣೆ (23) ಮೃತಪಟ್ಟಿದ್ದರು.

ಈ ವೇಳೆ ಅವರ ಮನೆಯ ಬೆಕ್ಕು ಕೂಡ ಬೆಂಕಿಯ ಕೆನ್ನಾಲಿಗೆಯಲ್ಲಿ ಬೆಂದು ಹೋಗಿತ್ತು.

ಮನೆಯಲ್ಲಿದ್ದ ಚಿನ್ನಾಭರಣ, ಪಾತ್ರೆ, ಪಗಡೆ, ಫ್ರಿಡ್ಜ್, ತಿಜೋರಿ, ಬಟ್ಟೆ ಸೇರಿ ಎಲ್ಲಾ ವಸ್ತುಗಳು ಸುಟ್ಟು ಭಸ್ಮ ಆಗಿದ್ದವು.

ತಡಗಿನ ಶೆಡ್ ಆಗಿದ್ದರಿಂದ ನೋಡ ನೋಡುತ್ತಿದ್ದಂತೆ ಇಡೀ ಮನೆಗೆ ಬೆಂಕಿ ಆವರಿಸಿತ್ತು.

ಮನೆಯಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿ, ಸಂಭ್ರಮದಲ್ಲಿದ್ದ ಗಜಾನನ ಧಮೋಣೆ ಅವರ ತಗಡಿನ ಶೆಡ್ಡಿನ ಮನೆಯಲ್ಲಿ ಮಂಗಳವಾರ ಮಧ್ಯರಾತ್ರಿ 2:30ರ ಸುಮಾರಿಗೆ ವಿದ್ಯುತ್ ಅವಘಡದಿಂದ ಇಡೀ ಮನೆ ಹೊತ್ತಿ ಉರಿದಿತ್ತು.

ಈ ವೇಳೆ ಕುಟುಂಬದ ನಾಲ್ವರು ಸ್ಥಳದಲ್ಲೆ ಕೊನೆಯುಸಿರೆಳೆದಿದ್ದರು.

ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಗಜಾನನ ಮತ್ತು ಪುತ್ರ ರೋಷನ್ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಿಸಲಾಗುತ್ತಿತ್ತು.

ಆದರೆ, ಚಿಕಿತ್ಸೆ ಫಲಕಾರಿ ಆಗದೇ ಇಂದು ಮಧ್ಯಾಹ್ನ ಮೃತಪಟ್ಟಿದ್ದಾರೆ ಎಂದು ಈಟಿವಿ ಭಾರತಕ್ಕೆ ಪೊಲೀಸ್ ಕಮಿಷನರ್ ಪ್ರಕಾಶ ನಿಕ್ಕಂ ತಿಳಿಸಿದ್ದಾರೆ.

ಬಡ ಕುಟುಂಬ: ಮನೆ ಯಜಮಾನ ಗಜಾನನ ಧಮೋಣೆಕಾರುಗಳಪೇಂಟಿಂಗ್‌ಕೆಲಸಮಾಡುತ್ತಿದ್ದರೆ, ಪುತ್ರ ರೋಷನ್ ಉದ್ಯಮಬಾಗದಲ್ಲಿ ಕಾರ್ಖಾನೆ ಕೆಲಸಕ್ಕೆ ಹೋಗುತ್ತಿದ್ದರು.

ಪತ್ನಿ ಶಾರದಾ ಗೌಂಡಿ ಕಾಯಕ, ಪುತ್ರಿಯರಾದ ಗಂಗಾ ಮತ್ತು ಪ್ರಿಯಾ ಅವರು ಝುರಾಕ್ಸ್ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದರು.

ಸಹೋದರಿ ಭಾರತಿ ಟೇಲರಿಂಗ್ ಕೆಲಸ ಮಾಡುತ್ತಾ ಬದುಕಿನ ಬಂಡಿ ಸಾಗಿಸುತ್ತಿದ್ದರು.

ಸ್ಥಳೀಯರು ಹೇಳುವ ಪ್ರಕಾರ ಶಾರ್ಟ್ ಸರ್ಕ್ಯೂಟ್‌ನಿಂದ ಫ್ರಿಡ್ಜ್ ಸ್ಫೋಟಗೊಂಡು ಬೆಂಕಿಯ ಜ್ವಾಲೆ ಹೊತ್ತುಕೊಂಡಿದೆ ಎಂಬ ಮಾಹಿತಿ ಇದ್ದು, ಪೊಲೀಸ್ ಕಮಿಷನರ್ ಪ್ರಕಾಶ ನಿಕ್ಕಂ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಶಾಸಕ ಆಸೀಫ್ ಸೇಠ್, ಡಿಸಿಪಿ ನಾರಾಯಣ ಬರಮನಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು.

# ಬೆಳಗಾವಿ| ಖಾನಾಪುರ ಗ್ರಾಮ ಪಂಚಾಯಿತಿ ಕಚೇರಿಗೆ ಬೆಂಕಿ; ಕಡತ ಭಸ್ಮ

**ಖಾನಾಪುರ (ಬೆಳಗಾವಿ ಜಿಲ್ಲೆ):** ತಾಲ್ಲೂಕಿನ ಹಿರೇಮುನವಳ್ಳಿ ಗ್ರಾಮ ಪಂಚಾಯಿತಿ ಕಚೇರಿಗೆ ಮಂಗಳವಾರ ಮಧ್ಯರಾತ್ರಿ ಕಿಡಿಗೇಡಿಗಳು ಬೆಂಕಿ ಹಚ್ಚಿದ ಪರಿಣಾಮ ಕಚೇರಿ ಯಲ್ಲಿದ್ದ ಕಂಪ್ಯೂಟರ್ ಮತ್ತು ಮಹತ್ವದ ಕಡತಗಳು ಭಸ್ಮಗೊಂಡಿವೆ.

ಬುಧವಾರ ಬೆಳಿಗ್ಗೆ ಕಚೇರಿಯ ಒಳಗಿಂದ ಹೊಗೆ ಹೊರಬರುತ್ತಿದ್ದುದನ್ನು ಗಮನಿಸಿದ ಸ್ಥಳೀಯರು ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಮಾಹಿತಿ ನೀಡಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಗ್ರಾಮ ಪಂಚಾಯಿತಿ ಕಟ್ಟಡಕ್ಕೂ ಹಾನಿಯಾಗಿದೆ. ಘಟನಾ ಸ್ಥಳಕ್ಕೆ ತಾಲ್ಲೂಕು ಪಂಚಾಯಿತಿ ಇಒ ರಮೇಶ ಮೇತ್ರಿ ಭೇಟಿ ನೀಡಿ ಪರಿಶೀಲಿಸಿದರು.

# ವಿಶ್ವಕರ್ಮರ ಸೃಜನಶೀಲತೆ, ಕಾಯಕ ನಿಷ್ಠೆ ಶ್ರೇಷ್ಠವಾದುದು



**ರಬಕವಿ :** ವಿಶ್ವಕರ್ಮರು ಕಲೆ, ಕೌಶಲ, ವಾಸ್ತುಶಿಲ್ಪ ಹಾಗೂ ನಿರ್ಮಾಣ ಕ್ಷೇತ್ರದಲ್ಲಿ ಅಪಾರ ಕೊಡುಗೆ ನೀಡಿದ ಮಹಾನ್ ಶಿಲ್ಪಿಯಾಗಿದ್ದಾರೆ. ಅವರ ಸೃಜನಶೀಲತೆ, ಕಾಯಕನಿಷ್ಠೆ ಮತ್ತು ಕೌಶಲದ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಸಮಾಜದ ಯುವ ಮುಖಂಡ ವಿನಾಯಕ ಪತ್ತಾರ ಹೇಳಿದರು.

ಗುರುವಾರ ರಬಕವಿ ವಿಶ್ವಕರ್ಮ ಸಮಾಜದ ವತಿಯಿಂದ ಕಾಳಿಕಾದೇವಿ ದೇವಸ್ಥಾನದ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಮಾಜದ ಸರ್ವರೂ ವಿಶ್ವಕರ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಅಲ್ಲದೆ ಸಮಾಜಕ್ಕೆ ಸರ್ಕಾರ ಕೊಡಮಾಡುವ ಅನೇಕ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಸಮಾಜದ ಅಧ್ಯಕ್ಷರಾದ ಹಣಮಂತ ಪತ್ತಾರ ಮಾತನಾಡಿ, ವಿಶ್ವಕರ್ಮರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಯುವ ಜನರು ಕೌಶಲಾಭಿವೃದ್ಧಿಗೆಹೆಚ್ಚಿನಆದ್ಯತೆನೀಡಬೇಕು. ಆಧುನಿಕ ತಂತ್ರಜ್ಞಾನ ಬೆಳೆಯುತ್ತಿರುವ ಸಂದರ್ಭದಲ್ಲಿ ಸಾಂಪ್ರದಾಯಿಕ ಕಲೆ, ಕರಕುಶಲ ಹಾಗೂ ವೃತ್ತಿಪರ ಜ್ಞಾನವನ್ನು ಉಳಿಸಿ ಬೆಳೆಸುವ ಅಗತ್ಯವಿದೆ. ವಿಶ್ವಕರ್ಮ ಸಮುದಾಯದ ಕಲೆ ಮತ್ತು ಕಾಯಕ ಪರಂಪರೆ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದು, ಅದರ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ವಿಶ್ವಕರ್ಮ ಜಯಂತಿಯನ್ನು ರಬಕವಿ ನಗರದ ವಿಶ್ವಕರ್ಮ ಸಮಾಜ ಬಾಂಧವರಿಂದ ಶ್ರದ್ಧಾ ಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿಈರಪ್ಪಬಡಿಗೇರ,ಶೇಖರ ಆಚಾರ್ಯರು, ಮಹಿಳಾ ಮಂಡಳಿಯ ಅಧ್ಯಕ್ಷೆ ವಿಜಯಲಕ್ಷ್ಮೀ ಸೋನಾರ, ಅಶ್ವಿನಿ ಆಸಂಗಿ, ಯುವಕ ಮಂಡಳಿ ಅಧ್ಯಕ್ಷ ಪವನ ಪತ್ತಾರ, ಕಾರ್ಯದರ್ಶಿ ಭಾಸ್ಕರ ಬಡಿಗೇರ, ಬಾಳು ಬಡಿಗೇರ, ಕಿಶೋರ ಪತ್ತಾರ, ಈಶ್ವರ ಸೋನಾರ, ಪ್ರಕಾಶ ಸೋನಾರ, ಸದಾಶಿವ ಬಡಿಗೇರ, ವಿಶ್ವನಾಥ ಸೋನಾರ, ದೀಪಕ ಆಸಂಗಿ, ಮೋನೇಶ ಸೋನಾರ, ಆನಂದ ಬಡಿಗೇರ ಮತ್ತು ವಿಶ್ವಕರ್ಮ ಸಮಾಜದ

# ಗುಣಮಟ್ಟದ ಶಿಕ್ಷಣದೊಂದಿಗೆ ಶಿಸ್ತು, ಪರಿಸರ ಪ್ರಜ್ಞೆ ಮುಖ್ಯ



**ರಬಕವಿ-ಬನಹಟ್ಟಿ :** ಇಂದಿನ ವಿದ್ಯಾರ್ಥಿಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಶಿಸ್ತು ಹಾಗೂ ಪರಿಸರ ಪ್ರಜ್ಞೆ ಬೆಳೆಸುವುದು ಮುಖ್ಯವಾಗಿದೆ. ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಶಿಕ್ಷಣದ ಉದ್ದೇಶವಾಗಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು.

ಅವರು ಗುರುವಾರ ರಬಕವಿ-ಬನಹಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾ ಭವನದಲ್ಲಿ ಪ್ರಸ್ತುತ ಸಾಲಿನ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾಲೇಜಿನ ಆವರಣ ಹಚ್ಚು ಹಸಿರಿನಿಂದ ಕಂಗೊಳಿಸುತ್ತಿದ್ದು, ಇಲ್ಲಿ ಶುದ್ಧವಾದ ಪರಿಸರವಿದ್ದು, ಕಾಲೇಜು ಆವರಣವು ಅಚ್ಚುಕಟ್ಟುತನ ಮತ್ತು ಸ್ವಚ್ಛತೆಯಿಂದ ಕೂಡಿದೆ.

ಇದು ನಿಜವಾದ ಮಾದರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆಗಿದೆ ಎಂದು ಶಾಸಕ ಸವದಿ ಅವರು ತಿಳಿಸಿದರು.

ರಬಕವಿಯ ಎಂ.ವಿ. ಪಟ್ಟಣ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಬಿ. ಎಸ್. ಕಾಂಬಳೆ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಮಯಪಾಲನೆಯನ್ನು ಅಳವಡಿಸಿಕೊಂಡರೆ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದರು.

ಕಾಲೇಜಿನ ಪ್ರಾಚಾರ್ಯ ಶಿವು ಹಂದಿಗುಂದ ಮಾತನಾಡಿ, ಕಾಲೇಜು ಉಪನ್ಯಾಸಕರು ಸಮರ್ಪಣಾ ಸೇವಾ ಭಾವದಿಂದ ಕಾರ್ಯ ಮಾಡುತ್ತಿರುವುದರಿಂದ ಇದು ಮಾದರಿ ಕಾಲೇಜು ಆಗಿದೆ. ಸರ್ಕಾರಿ ಕಾಲೇಜುಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದರು.

ಮಹಾವೀರ ಖವಟಕೊಪ್ಪ, ಪುಂಡಲೀಕ ಬಾಡಗಿ, ಅಶೋಕ ಮುದೇನವರ, ಭೀಮಾಸಾಹೇಬ ದೇಸಾಯಿ ಮಾತನಾಡಿದರು.

ಎಸ್. ಡಿ. ಗಾಣಿಗೇರ, ಅಶೋಕ ಕನ್ನಾಳ, ಮಹಾಂತೇಶ ರಡ್ಡೆರಟ್ಟಿ, ಚೇತನ ಡಾಗಾ, ಬಿ. ಎಸ್. ನಾಯಿಕ, ಮೀನಾಕ್ಷಿ ಜಂಬಗಿ, ರಾಜಶೇಖರ ಬೀಳಗಿ ಮತ್ತು ವಿದ್ಯಾರ್ಥಿ ಪ್ರತಿನಿಧಿಗಳು ಹಾಜರಿದ್ದರು.

# ಹಸಿದವರ ಪಾಲಿಗೆ ಇಂದಿರಾ ಕ್ಯಾಂಟಿನ್ ಆಸರೆ- ವಿಜಯಾನಂದ ಕಾಶಪ್ಪನವರ



**ರಬಕವಿ-ಬನಹಟ್ಟಿ:**ಮಾಜಿಪ್ರಧಾನಿದಿವಂಗತ ಇಂದಿರಾ ಗಾಂಧಿ ಅವರು ಈ ದೇಶಕ್ಕೆ ಇಪ್ಪತ್ತು ಅಂಶಗಳ ಕಾರ್ಯಕ್ರಮಗಳನ್ನು ನೀಡುವುದರ ಮೂಲಕ ದೇಶವನ್ನು ಅಭಿವೃದ್ಧಿ ಪಥದತ್ತ ತೆಗೆದುಕೊಂಡು ಹೋದರು. ಬಡವರ, ದೀನ ದಲಿತರ, ಕಾರ್ಮಿಕರ, ಬಡ ವಿದ್ಯಾರ್ಥಿಗಳ ಹಸಿವನ್ನು ನೀಗಿಸುವ ನಿಟ್ಟಿನಲ್ಲಿ ಸರ್ಕಾರ ಇಂದಿರಾ ಕ್ಯಾಂಟಿನ್ ಆರಂಭಿಸಿದೆ. ಇದು ಜಿಲ್ಲೆಯಲ್ಲಿ ಆರಂಭಗೊಂಡ ಹದಿನಾರನೆಯ ಇಂದಿರಾ ಕ್ಯಾಂಟಿನ ಆಗಿದೆ. ಮುಂದೆ ರಬಕವಿಯಲ್ಲಿ, ಮಹಾಲಿಂಗಪುರ ಪಟ್ಟಣದಲ್ಲಿ ಕೂಡ ಆರಂಭಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ ಹೇಳಿದರು. ಅವರು ರಬಕವಿ-ಬನಹಟ್ಟಿತಾಲೂಕಾಆರೋಗ್ಯಸಮುದಾಯ ಕೇಂದ್ರದ ಬಳಿ ನೂತನ ಇಂದಿರಾ ಕ್ಯಾಂಟಿನ್ಗೆ ಚಾಲನೆ ನೀಡಿ ಮಾತನಾಡಿದರು.

ಹಸಿವು ಮುಕ್ತ ಕರ್ನಾಟಕ ಎಂಬ ದಿವ್ಯ ಸಂಕಲ್ಪವನ್ನು ಇರಿಸಿಕೊಂಡು ರಾಜ್ಯಾದ್ಯಂತ ಡಿ.ಕೆ. ಶಿವಕುಮಾರರ ಸರಕಾರದ ವತಿಯಿಂದ ಇಂದಿರಾ ಕ್ಯಾಂಟಿನ್ಗಳನ್ನು ನಿರ್ಮಿಸಲಾಗುತ್ತಿದೆ. ಇಂದಿರಾ ಕ್ಯಾಂಟಿನ್ ಯೋಜನೆ ಹಸಿದವರಿಗೆ ಆಸರೆಯಾಗಲಿದೆ. ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಕನಸು ನನಸಾಗಿಸುವ ಕಾರ್ಯವಾಗಿದೆ. ಬಡವರು, ಕೂಲಿಕಾರ್ಮಿಕರು, ಪ್ರವಾಸಿಗರು, ಶಾಲಾ ಮಕ್ಕಳು ಸೇರಿದಂತೆ ಎಲ್ಲ ವರ್ಗದ ಜನರಿಗೆ ಇದರಿಂದ ಅನುಕೂಲವಾಗಲಿದೆ. ಗುಣಮಟ್ಟದ ಆಹಾರವನ್ನು ಸುಲಭವಾಗಿ ಲಭ್ಯವಾಗುವಂತೆ ಮಾಡುವ ದಿಟ್ಟ ಹೆಜ್ಜೆ ಇದಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ರಾಜ್ಯದ ಜನರ ಅಭಿವೃದ್ಧಿಗಾಗಿ ಪಂಚ ಗ್ಯಾರಂಟಿಗಳನ್ನು ನೀಡಿದ್ದು, ಸರ್ಕಾರ ಅವುಗಳನ್ನು ಈಗಲೂ ಸಮರ್ಥವಾಗಿ ಮುಂದುವರೆಸಿಕೊಂಡು ಬಂದಿದೆ. ಈಗಿನ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ ಕೂಡಾ ಯುವ ಜನರು ದುಶ್ಚಟಗಳಿಗೆ ಒಳಗಾಗಬಾರದು ಎಂಬ ಉದ್ದೇಶದಿಂದ ಭಾರತ ಜೋಡೋ ಯೋಜನೆಯ ಮೂಲಕ ವಿದ್ಯಾರ್ಥಿಗಳನ್ನು ಸಂಘಟಿಸಿ ಪ್ರತಿ ಗ್ರಾಮ ಪಂಚಾಯಿತಿ, ನಗರಸಭೆ ಮತ್ತು ಪುರಸಭೆಗಳಲ್ಲಿ ಸಂಘಟನೆ ಮಾಡಿ, ಅಂಥ ಯುವಕ ಸಂಘಕ್ಕೆ ಹತ್ತು ಲಕ್ಷರೂ. ಅನುದಾನ ನೀಡುವುದರ ಮೂಲಕ ಸನ್ಮಾರ್ಗದಲ್ಲಿ ನಡೆಯುವಂತೆ ಮಾಡಿದೆ. ಎಲ್ಲಾ ದಾನಗಳಲ್ಲಿ ಅನ್ನದಾನ ಶ್ರೇಷ್ಠ ದಾನವಾಗಿದೆ. ಅನ್ನದಾನ ಮಾಡಿದವರು ಭಗವಂತನ ಮೆಚ್ಚುಗೆಗೆ ಪಾತ್ರರಾಗುತ್ತಾರೆ ಎಂದರು.


ವಿಧಾನ ಪರಿಷತ್ ಉಪ ಸಭಾಪತಿ ಶ್ರೀಮತಿ ಡಾ. ಉಮಾಶ್ರೀ ಮಾತನಾಡಿ, ಇಂದಿರಾ ಕ್ಯಾಂಟಿನ್ ಪ್ರಜಾಪ್ರಭುತ್ವದ ಅನ್ನ ದಾಸೋಹವಾಗಿದೆ. ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಹನ್ನೆರಡನೆಯ ಶತಮಾನದ ಮಹಾನ್ ಶರಣ ಬಸವಣ್ಣನವರ ತತ್ವಗಳನ್ನು ಅಳವಡಿಸಿಕೊಂಡು ಪ್ರತಿಯೊಂದು ವರ್ಗದವರಿಗೂ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯದಲ್ಲಿ ಇಂದಿರಾ ಕ್ಯಾಂಟಿನ್ ಆರಂಭಿಸಿದರು ಎಂದರು.

ಶಾಸಕ ಸಿದ್ದು ಸವದಿ ಮಾತನಾಡಿ, ಇಂದಿರಾ ಕ್ಯಾಂಟಿನನಗರದುಡವರಿಗೆ, ದೀನದಲಿತರಿಗೆ, ವಿದ್ಯಾರ್ಥಿ ಸಮೂಹಕ್ಕೆ ಗುಣಮಟ್ಟದ ಆಹಾರವನ್ನು ನೀಡುವ ದಿಶೆಯಲ್ಲಿ ಗಮನ ನೀಡಬೇಕು. ಬಿಜೆಪಿ ಸರ್ಕಾರ ಕೂಡಾ ರಾಜ್ಯದ ಜನತೆಯ ಅನುಕೂಲಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿತ್ತು ಎಂದರು. ಮಹಾಲಿಂಗಪುರ ಪಟ್ಟಣದಲ್ಲಿಯೂ ಇಂದಿರಾ ಕ್ಯಾಂಟಿನ್ ಆರಂಭಿಸುವಂತೆಮನವಿಮಾಡಿಕೊಂಡರು.

ಕಾರ್ಯಕ್ರಮದಲ್ಲಿ ಬನಹಟ್ಟಿಯ ಹಿರೇಮಠದಶರಣಬಸವಶಿವಾಚಾರ್ಯರು ಹಾಗೂ ರಬಕವಿಯ ಗುರುದೇವ ಬ್ರಹ್ಮಾನಂದ ಆಶ್ರಮದ ಗುರುಸಿದ್ದೇಶ್ವರ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಎಂ. ರೇಣುಕಾ, ಜಮಖಂಡಿಯ ಕಂದಾಯ ಉಪವಿಭಾಗಾಧಿಕಾರಿ ಶ್ರೀಮತಿ ಶ್ವೇತಾ ಮೋಹನ ಬೀಡಿಕರ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ದಾನಪ್ಪ ಹುಲಜತ್ತಿ, ಜಮಖಂಡಿಯ ಪೊಲೀಸ್ ಉಪ ಅಧೀಕ್ಷಕರಾದ ಎಸ್. ರೋಷನ್ ಜಮೀರ್, ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ನಾವಲಗಿ ಮಾರುತೇಶ್ವರ ದೇವಸ್ಥಾನಕ್ಕೆ ಸಚಿವ ಕಾಶಪ್ಪನವರ ಭೇಟಿ



**ರಬಕವಿ-ಬನಹಟ್ಟಿ :** ತಾಲೂಕಿನ ನಾವಲಗಿ ಗ್ರಾಮದ ಆರಾಧ್ಯ ದೈವ ಉದ್ಭವ ಮೂರ್ತಿ ಶ್ರೀ ಮಾರುತೇಶ್ವರ ದೇವಸ್ಥಾನಕ್ಕೆಜಿಲ್ಲಾಉಸ್ತುವಾರಿಸಚಿವವಿಜಯಾನಂದ ಕಾಶಪ್ಪನವರ ಅವರು ಭೇಟಿ ನೀಡಿ ದೇವರ ದರ್ಶನ ಪಡೆದು ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ದೇವಸ್ಥಾನಕ್ಕೆ ಆಗಮಿಸಿದ ಸಚಿವರನ್ನು ಗ್ರಾಮಸ್ಥರು ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದರು. ಗ್ರಾಮಸ್ಥರ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ನಾವಲಗಿ ಗ್ರಾಮದ ಮಾರುತೇಶ್ವರ ದೇವಸ್ಥಾನವು ಭಕ್ತರ ಶ್ರದ್ಧಾ-ಭಕ್ತಿಯ ಪ್ರಮುಖ ಕೇಂದ್ರವಾಗಿದ್ದು,

ದೇವಸ್ಥಾನದ ಅಭಿವೃದ್ಧಿಯ ಜೊತೆಗೆ ಗ್ರಾಮಗಳ ಮೂಲ ಸೌಕರ್ಯ ಅಭಿವೃದ್ಧಿಗೂ ಸರ್ಕಾರದಿಂದ ಅಗತ್ಯ ಸಹಕಾರ ನೀಡಲಾಗುವುದು ಸ್ಥಳೀಯರ ಅಗತ್ಯಗಳನ್ನು ಪರಿಗಣಿಸಿ ಹಂತ ಹಂತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಸಿದ್ದು ಕೊಣ್ಣೂರ, ಮಹೇಶ ಚಿಂಚಖಂಡಿ, ಹಣಮಂತ ಬರಗಾಲ, ಕಲ್ಮೇಶ ದೇವದಾಸ, ಮಂಜು ಕಾಂತಿ, ಜಗದೀಶ ಪಾಟೀಲ, ಮಾರುತಿ ಗಣಿ, ಶಿವಪ್ಪ ವಾಲಿ, ಮಹಾಂತೇಶ ಮನ್ಮಿ, ಕಾಶಪ್ಪ ತಳವಾರ, ಎಂ. ಆರ್. ವಾಲಿ, ತುಕ್ಕಪ್ಪ ಬೂಮಕ್ಕನವರ, ದಾನಪ್ಪ ಆಸಂಗಿ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

Printed by Published by ASHWARYA PALLATE on behalf of ASHWARYA PALLATE, Printed at DHARIDEEPA PRINTERS & PUBLISHERS, NO. 74, 4TH MAIN, 7TH CROSS NEAR CHOWDESHWARI TEMPLE, KAVERINAGAR, MAHADEVAPURA, BENGALURU, KARNATAKA - 560048. and Published at BASAVESHWAR CIRCLE, 4TH CROSS, NEKAR NAGAR, HUBLI, OLD HUBLI, DHARWAD, KARNATAKA - 580024. Editor ASHWARYA PALLATE